ದಾವಣಗೆರೆಯಿಂದ

ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

Kannada Daily

Davangere **Volume :**1 **Issue:** 99 Monday **05-10-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 99 ಸೋಮವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

ಮೇವಿನ ಕೊರತೆಯ ಆತಂಕದತ್ತ ಜಗಳೂರು!

21 ವಾರಕ್ಕಷ್ಟೇ ಒಣಮೇವು ಸಂಗ್ರಹ; 46 ವಾರಗಳ ಮೇವಿನ ನಿರೀಕ್ಷೆಯಲ್ಲಿ ಇಲಾಖೆ

"ಮುಂಜಾನೆಯ ಮೆರಗು"

ಜಗಳೂರು, ಅ, 04– ತಾಲೂಕಿನಲ್ಲಿ ಮುಂಗಾರು ಮಳೆ ಸಂಪೂರ್ಣ ಕೈಕೊಟ್ಟ ಪರಿಣಾಮ ಕೃಷಿ ಚಟುವಟಿಕೆಗಳ ಮೇಲೆ ಭಾರಿ ಹೊಡೆತ ಬಿದ್ದಿರುವ ಬೆನ್ನಲ್ಲೇ, ಜಾನುವಾರುಗಳಿಗೆ ಮೇವಿನ ಕೊರತೆಯ ಆತಂಕವೂ ಎದುರಾಗುವ ಮುನ್ಸೂಚನೆ ಕಂಡುಬಂದಿದೆ.

ತಾಲೂಕಿನಾದ್ಯಂತ 40 ಸಾವಿರ ಹೆಕ್ಟೇರ್‌ಗೂ ಅಧಿಕ ಪ್ರದೇಶದಲ್ಲಿ ಬಿತ್ತನೆಯಾಗಿದ್ದ ರಾಗಿ, ಮೆಕ್ಕೆಜೋಳ, ಶೇಂಗಾ ಸೇರಿದಂತೆ ವಿವಿಧ ಬೆಳೆಗಳು ಮಳೆಯ ಕೊರತೆಯಿಂದ ಒಣಗಿದ್ದು, ಬಹುತೇಕ ಕಡೆ ರೈತರಿಗೆ ನಿರೀಕ್ಷಿತ ಫಸಲು ಕೈ ಸೇರದಂತಾಗಿದೆ. ಒಂದೆಡೆ ಬೆಳೆ ನಷ್ಟದಿಂದ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದರೆ, ಮತ್ತೊಂದೆಡೆ ಜಾನುವಾರುಗಳನ್ನು ಉಳಿಸಿಕೊಳ್ಳಲು ಅಗತ್ಯವಾದ ಮೇವಿನ ಲಭ್ಯತೆಯ ಪ್ರಶ್ನೆ ಎದುರಾಗಿದೆ.

ಸಾಮಾನ್ಯವಾಗಿ ಮುಂಗಾರು ಮಳೆ ಉತ್ತಮವಾಗಿ ಬಂದಿದ್ದರೆ ಹೊಲಗಳಲ್ಲಿ ಬೆಳೆಯುವ ಬೆಳೆಗಳಿಂದಲೇ ಸಾಕಷ್ಟು ಮೇವು ಲಭ್ಯವಾಗುತ್ತಿತ್ತು. ಆದರೆ ಈ ಬಾರಿ ಮಳೆ ಕೈಕೊಟ್ಟಿರುವುದರಿಂದ ಹಸಿರು ಮೇವು ಮಾತ್ರವಲ್ಲದೆ, ಮುಂದಿನ ದಿನಗಳಲ್ಲಿ ಒಣಮೇವಿನ ಲಭ್ಯತೆಯ ಮೇಲೂ ಪರಿಣಾಮ ಬೀರುವ ಸಾಧ್ಯತೆ ಇದೆ.



2 ಸಾವಿರ ಕಿಟ್‌ಗಳ ಬೇಡಿಕೆ; 900 ಕಿಟ್‌ಗಳ ಪೂರೈಕೆ

"ತಾಲೂಕಿಗೆ ಒಟ್ಟು 2 ಸಾವಿರ ಮೇವಿನ ಕಿಟ್‌ಗಳ ಬೇಡಿಕೆ ಸಲ್ಲಿಸಲಾಗಿದೆ. ಪ್ರಸ್ತುತ 900 ಕಿಟ್‌ಗಳು ಬಂದಿದ್ದು, ಮುಂದಿನ ದಿನಗಳಲ್ಲಿ ಉಳಿದ ಕಿಟ್‌ಗಳು ಹಂತ ಹಂತವಾಗಿ ಬರಲಿವೆ. ಬೇಡಿಕೆಗೆ ಅನುಗುಣವಾಗಿ ರೈತರಿಗೆ ಕಿಟ್‌ಗಳನ್ನು ವಿತರಿಸಲಾಗುವುದು."

-- ಲಿಂಗರಾಜ್, ಸಹಾಯಕ ನಿರ್ದೇಶಕರು, ಪಶುಸಂಗೋಪನಾ ಇಲಾಖೆ

21 ವಾರಕ್ಕಷ್ಟೇ ಒಣಮೇವು!

ಪಶುಸಂಗೋಪನಾ ಇಲಾಖೆ ನಡೆಸಿರುವ ಪ್ರಾಥಮಿಕ ಸಮೀಕ್ಷೆಯ ಪ್ರಕಾರ, ರೈತರು ತಮ್ಮ ಕಣಗಳಲ್ಲಿ ಸಂಗ್ರಹಿಸಿಕೊಂಡಿರುವ ಒಣಮೇವಿನಿಂದ ಸುಮಾರು 21 ವಾರಗಳ ಕಾಲ ಜಾನುವಾರುಗಳಿಗೆ ಮೇವು ಒದಗಿಸಬಹುದಾಗಿದೆ.

ಇದರೊಂದಿಗೆ ಕೊಳವೆಬಾವಿ ಸೇರಿದಂತೆ ನೀರಾವರಿ ಸೌಲಭ್ಯ ಹೊಂದಿರುವ ಪ್ರದೇಶಗಳಲ್ಲಿ ರೈತರು ಬೆಳೆದಿರುವ ಮೆಕ್ಕೆಜೋಳ, ರಾಗಿ ಮತ್ತಿತರ ಬೆಳೆಗಳಿಂದ ದೊರೆಯುವ ಮೇವನ್ನು ಲೆಕ್ಕಕ್ಕೆ ತೆಗೆದುಕೊಂಡರೆ, ಒಟ್ಟಾರೆ ಸುಮಾರು 46 ವಾರಗಳಷ್ಟು ಮೇವಿನ ಲಭ್ಯತೆ ಇರಲಿದೆ ಎಂದು ಇಲಾಖೆ ಅಂದಾಜಿಸಿದೆ.

1.30 ಲಕ್ಷ ಜಾನುವಾರುಗಳಿಗೆ ಆಹಾರ ಸವಾಲು

ತಾಲೂಕಿನಲ್ಲಿ ಸುಮಾರು 1.30 ಲಕ್ಷ ಹಸು ಮತ್ತು ಎಮ್ಮೆಗಳು ಹಾಗೂ 33 ಸಾವಿರಕ್ಕೂ ಅಧಿಕ ಕುರಿ ಮತ್ತು ಮೇಕೆಗಳಿದ್ದು, ಇಷ್ಟು ದೊಡ್ಡ ಪ್ರಮಾಣದ ಜಾನುವಾರುಗಳಿಗೆ ನಿರಂತರವಾಗಿ ಮೇವು ಒದಗಿಸುವುದು ಬರಗಾಲದ ಸಂದರ್ಭದಲ್ಲಿ ಪ್ರಮುಖ ಸವಾಲಾಗಿದೆ.

ಹಿಂಗಾರು ಮಳೆಯಲ್ಲೂ ಕೊರತೆಯ ಪರಿಸ್ಥಿತಿ ಮುಂದುವರಿದರೆ ಮೇವಿನ ಸಮಸ್ಯೆ ಮತ್ತಷ್ಟು ಗಂಭೀರವಾಗುವ ಸಾಧ್ಯತೆ ಇದೆ. ಹೀಗಾಗಿ ಮುನ್ನೆಚ್ಚರಿಕಾ ಕ್ರಮವಾಗಿ ರೈತರು ಈಗಿನಿಂದಲೇ ಮೇವಿನ ಸಂಗ್ರಹಣೆ ಮಾಡಿಕೊಳ್ಳುವುದು ಅಗತ್ಯವಾಗಿದೆ.

ನೆಪಿಯರ್ ಹುಲ್ಲಿಗೆ ಇಲಾಖೆಯ ಒತ್ತು

ಕೊಳವೆಬಾವಿ ಹೊಂದಿರುವ ರೈತರು ತಮ್ಮ ಜಮೀನಿನಲ್ಲಿ ಮೇವಿನ ಬೆಳೆ ಬೆಳೆಯಲು ಮುಂದಾಗುವಂತೆ ಇಲಾಖೆ ಸಲಹೆ ನೀಡಿದೆ. ವಿಶೇಷವಾಗಿ ನೆಪಿಯರ್ ಮೇವಿನ ಬೆಳೆ ಕಡಿಮೆ ಅವಧಿಯಲ್ಲಿ ಉತ್ತಮವಾಗಿ ಬೆಳೆಯುವುದರಿಂದ ರೈತರಿಗೆ ಉಪಯುಕ್ತವಾಗಲಿದೆ.

ಸುಮಾರು 45 ದಿನಗಳಲ್ಲಿ ನೆಪಿಯರ್ ಉತ್ತಮ ಎತ್ತರಕ್ಕೆ ಬೆಳೆಯಲಿದ್ದು, ಜಾನುವಾರುಗಳು ಇದನ್ನು ಇಷ್ಟಪಟ್ಟು ಸೇವಿಸುತ್ತವೆ. ಹೀಗಾಗಿ ನೀರಾವರಿ ಸೌಲಭ್ಯ ಹೊಂದಿರುವ ರೈತರು ನೆಪಿಯರ್ ಸೇರಿದಂತೆ ವಿವಿಧ ಮೇವಿನ ಬೆಳೆಗಳನ್ನು ಬೆಳೆಯುವ ಮೂಲಕ ಮುಂದಿನ ದಿನಗಳಲ್ಲಿ ಎದುರಾಗಬಹುದಾದ ಮೇವಿನ ಕೊರತೆಯನ್ನು ತಗ್ಗಿಸಿಕೊಳ್ಳಬಹುದಾಗಿದೆ.



ಈಗಿನಿಂದಲೇ ಮೇವು ಸಂಗ್ರಹಿಸಿಕೊಳ್ಳಿ

"ಬರಗಾಲದ ಹಿನ್ನೆಲೆಯಲ್ಲಿ ರೈತರು ತಮ್ಮ ಜಾನುವಾರುಗಳನ್ನು ಉಳಿಸಿಕೊಳ್ಳಲು ಮುನ್ನೆಚ್ಚರಿಕಾ ಕ್ರಮವಾಗಿ ಮೇವಿನ ಸಂಗ್ರಹಣೆ ಮಾಡಿಕೊಳ್ಳಬೇಕು. ನೀರಾವರಿ ಸೌಲಭ್ಯ ಇರುವ ರೈತರು ಮೇವಿನ ಬೆಳೆಗಳನ್ನು ಬೆಳೆಯುವುದು ಸೂಕ್ತ. ಮುಂದಿನ ದಿನಗಳಲ್ಲಿ ಮೇವಿನ ಕೊರತೆಯಾಗದಂತೆ ಈಗಿನಿಂದಲೇ ಸಿದ್ಧತೆ ಮಾಡಿಕೊಳ್ಳುವುದು ಅಗತ್ಯ."

--- ಚಿರಂಜೀವಿ, ತಾಲೂಕು ಅಧ್ಯಕ್ಷರು, ರೈತ ಸಂಘ ಹಾಗೂ ಹಸಿರು ಸೇನೆ

ಬೆಳೆಯುವ ಮೂಲಕ ಮುಂದಿನ ದಿನಗಳಲ್ಲಿ ಎದುರಾಗಬಹುದಾದ ಮೇವಿನ ಕೊರತೆಯನ್ನು ತಗ್ಗಿಸಿಕೊಳ್ಳಬಹುದಾಗಿದೆ.

ರೈತರಿಗೆ ಉಚಿತ ಮೇವಿನ ಕಿಟ್

ಬರಗಾಲದ ಹಿನ್ನೆಲೆಯಲ್ಲಿ ಪಶುಸಂಗೋಪನಾ ಇಲಾಖೆ ವತಿಯಿಂದ ರೈತರಿಗೆ ಮೇವಿನ ಕಿಟ್‌ಗಳನ್ನು ಉಚಿತವಾಗಿ ವಿತರಿಸಲಾಗುತ್ತಿದೆ. ಒಬ್ಬ ರೈತನಿಗೆ ಒಂದು ಕಿಟ್ ನೀಡಲಾಗುತ್ತಿದ್ದು, ಮೇವಿನ ಬೆಳೆ ಬೆಳೆಸಲು ಇದರಿಂದ ಅನುಕೂಲವಾಗಲಿದೆ.

ಕಮಲ ಕೆಸರಲ್ಲಿದ್ದರೆ ಚಂದ, ತೆನೆ ಗಿಡದಲ್ಲಿದ್ದರೆ ಚಂದ, ಹಸ್ತ ಅಧಿಕಾರದಲ್ಲಿದ್ದರೆ ಚಂದ: ಶಾಸಕ ಬಿ.ದೇವೇಂದ್ರಪ್ಪ

"ಮುಂಜಾನೆಯ ಮೆರಗು"

ಜಗಳೂರು, ಅ, 04– ಜಗಳೂರು ವಿಧಾನಸಭಾ ಕ್ಷೇತ್ರದ ವಿವಿಧ ಗ್ರಾಮಗಳ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಶಾಸಕ ಬಿ.ದೇವೇಂದ್ರಪ್ಪ ಅವರ ನೇತೃತ್ವದಲ್ಲಿ ಬಿಜೆಪಿ ಪಕ್ಷ ತೊರೆದು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು.



ಜಗಳೂರಿನಲ್ಲಿ ನಡೆದ ಪಕ್ಷ ಸೇರ್ಪಡೆ ಕಾರ್ಯಕ್ರಮದಲ್ಲಿ ವಿವಿಧ ಗ್ರಾಮಗಳ ಮುಖಂಡರು ಕಾಂಗ್ರೆಸ್ ಪಕ್ಷದ ತತ್ವ, ಸಿದ್ಧಾಂತ ಹಾಗೂ ಸರ್ಕಾರದ ಅಭಿವೃದ್ಧಿ ಕಾರ್ಯಗಳನ್ನು ಮೆಚ್ಚಿ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಗೊಂಡರು. ಈ ಸಂದರ್ಭದಲ್ಲಿ ಶಾಸಕ ಬಿ.ದೇವೇಂದ್ರಪ್ಪ ಅವರು ಪಕ್ಷದ ಶಾಲು ಹೊದಿಸಿ ಮುಖಂಡರು ಹಾಗೂ ಕಾರ್ಯಕರ್ತರನ್ನು ಆತ್ಮೀಯವಾಗಿ ಬರಮಾಡಿಕೊಂಡರು.

ನಂತರ ಮಾತನಾಡಿದ ಶಾಸಕ ಬಿ.ದೇವೇಂದ್ರಪ್ಪ, "ಕಾಂಗ್ರೆಸ್ ಪಕ್ಷದ ಇತಿಹಾಸ, ತತ್ವ–ಸಿದ್ಧಾಂತ ಹಾಗೂ ಜನಪರ ಆಡಳಿತವನ್ನು ಅರಿತುಕೊಂಡು ಬಿಜೆಪಿ ಪಕ್ಷ ತೊರೆದು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗುತ್ತಿರುವುದು ಸಂತಸದ ಸಂಗತಿ. ಕಾಂಗ್ರೆಸ್ ಪಕ್ಷವು ಎಲ್ಲ ವರ್ಗದ ಜನರ ಹಿತ ಕಾಪಾಡುವ ಉದ್ದೇಶದಿಂದ ಅಭಿವೃದ್ಧಿ ಕಾರ್ಯಗಳಿಗೆ ಆದ್ಯತೆ ನೀಡುತ್ತಿದೆ" ಎಂದರು.

ಈ ಸಂದರ್ಭದಲ್ಲಿ ತೋರಣಗಟ್ಟಿ ಗ್ರಾಮದ ರಾಮಣ್ಣ, ತಿಪ್ಪೇಸ್ವಾಮಿ, ಕಲ್ಲೇದೇವರಪುರ ಗ್ರಾಮದ ಮಹೇಶಣ್ಣ, ಅಕನೂರು ಗ್ರಾಮದ ಪಾತಲಿಂಗಪ್ಪ, ಹಿರೇಮಲ್ಲನಹೊಳೆ ಗ್ರಾಮದ ತಿಪ್ಪಣ್ಣ, ಬಸವಾಪುರ ಗ್ರಾಮದ ಮಾಗಡಪ್ಪ, ಕೆಚ್ಚೇನಹಳ್ಳಿ ಗ್ರಾಮದ ಕೆ.ಸಿ. ಬಸಟಪ್ಪ ಸೇರಿದಂತೆ ವಿವಿಧ ಗ್ರಾಮಗಳ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಗೊಂಡರು.

ಪಕ್ಷಕ್ಕೆ ಸೇರ್ಪಡೆಗೊಂಡ ಮುಖಂಡರು ಕಾಂಗ್ರೆಸ್ ಪಕ್ಷದ ತತ್ವ–ಸಿದ್ಧಾಂತಗಳನ್ನು ಒಪ್ಪಿಕೊಂಡು, ಪಕ್ಷದ ಸಂಘಟನೆ ಬಲಪಡಿಸಲು ಶ್ರಮಿಸುವುದಾಗಿ ತಿಳಿಸಿದರು. ಈ ವೇಳೆ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಬಿಲ್ ಪಾವತಿ ಬಾಕಿ: ಮರೇನಹಳ್ಳಿಗೆ ಟ್ಯಾಂಕರ್ ನೀರು ಸ್ಥಗಿತ!

ನೀರಿಗಾಗಿ ಗ್ರಾಮಸ್ಥರ ಪರದಾಟ। ಅಧಿಕಾರಿಗಳ ಮಧ್ಯಸ್ಥಿಕೆಯಿಂದ ತಾತ್ಕಾಲಿಕ ಪರಿಹಾರ

"ಮುಂಜಾನೆಯ ಮೆರಗು"

ಜಗಳೂರು, ಅ, 04– ಟ್ಯಾಂಕರ್ ಮೂಲಕ ಈಗಾಗಲೇ ಸರಬರಾಜು ಮಾಡಿರುವ ನೀರಿನ ಬಿಲ್ ಪಾವತಿಯಾಗದ ಹಿನ್ನೆಲೆಯಲ್ಲಿ ನೀರು ಸರಬರಾಜು ಸ್ಥಗಿತಗೊಳಿಸಿದ್ದರಿಂದ ತಾಲೂಕಿನ ದೊಣೆಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮರೇನಹಳ್ಳಿ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರಗೊಂಡಿದ್ದು, ಗ್ರಾಮಸ್ಥರು ನೀರಿಗಾಗಿ ಪರದಾಡುವಂತಾಗಿದೆ.

ಮಳೆ ಕೊರತೆ ಹಾಗೂ ಅಂತರ್ಜಲ ಮಟ್ಟ ಕುಸಿತದಿಂದ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಿದ್ದು, ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲಾಗುತ್ತಿತ್ತು. ಆದರೆ, ಈಗಾಗಲೇ ಸರಬರಾಜು ಮಾಡಿರುವ ನೀರಿನ ಬಿಲ್ ಪಾವತಿಯಾಗದಿರುವ ಹಿನ್ನೆಲೆಯಲ್ಲಿ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲು ಸಾಧ್ಯವಿಲ್ಲ ಎಂದು ನೀರು ಸರಬರಾಜುದಾರರು ಪಟ್ಟು ಹಿಡಿದ ಹಿನ್ನೆಲೆಯಲ್ಲಿ ಗ್ರಾಮಕ್ಕೆ ನೀರು ಸರಬರಾಜು ಸ್ಥಗಿತಗೊಂಡಿತ್ತು.

ಇದರಿಂದ ಕುಡಿಯುವ ನೀರಿಗಾಗಿ ಗ್ರಾಮಸ್ಥರು ದೂರದ ಪ್ರದೇಶಗಳಿಗೆ ತೆರಳಿ ನೀರು ತರುವ ಪರಿಸ್ಥಿತಿ ನಿರ್ಮಾಣವಾಗಿತ್ತು. ಸಮಸ್ಯೆ ಬಗೆಹರಿಸುವಂತೆ ಗ್ರಾಮಸ್ಥರು ಅಧಿಕಾರಿಗಳ ಗಮನಕ್ಕೆ ತಂದ ಹಿನ್ನೆಲೆಯಲ್ಲಿ ಶನಿವಾರ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸಹಾಯಕ ಕಾರ್ಯಪಾಲಕ ಎಂಜಿನಿಯರ್ (ಎಇಇ) ಸಾಧಿಕ್ ವುಲ್ಲಾ ಅವರು ಟ್ಯಾಂಕರ್ ನೀರು ಸರಬರಾಜುದಾರರೊಂದಿಗೆ ಚರ್ಚೆ ನಡೆಸಿದರು.



ಈ ಸಂದರ್ಭದಲ್ಲಿ ಈಗಾಗಲೇ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಿರುವ ಬಿಲ್‌ಗಳನ್ನು ಪಾವತಿಸುವವರೆಗೆ ನೀರು ಸರಬರಾಜು ಮಾಡಲು ಸಾಧ್ಯವಿಲ್ಲ ಎಂದು ನೀರು ಸರಬರಾಜುದಾರ ತಿಪ್ಪೇಸ್ವಾಮಿ ಅವರು ಸ್ಪಷ್ಟಪಡಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಎಇಇ ಸಾಧಿಕ್ ವುಲ್ಲಾ ಅವರು, ಪ್ರಸ್ತುತ ಲಭ್ಯವಾಗಿರುವ ಅನುದಾನದಲ್ಲಿ ಬಾಕಿ ಇರುವ ಬಿಲ್‌ನ ಅರ್ಧ ಮೊತ್ತವನ್ನು ಪಾವತಿಸುವುದಾಗಿ ಹಾಗೂ ಮುಂದಿನ ದಿನಗಳಲ್ಲಿ ಉಳಿದ ಬಿಲ್ ಮೊತ್ತವನ್ನು ಪಾವತಿಸಲು ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಅಧಿಕಾರಿಗಳ ಭರವಸೆಯ ಹಿನ್ನೆಲೆಯಲ್ಲಿ ಟ್ಯಾಂಕರ್ ನೀರು ಸರಬರಾಜುದಾರರು ಗ್ರಾಮಕ್ಕೆ ನೀರು ಸರಬರಾಜು ಮಾಡಲು ಒಪ್ಪಿಗೆ ಸೂಚಿಸಿದರು. ಬಳಿಕ ಗ್ರಾಮಕ್ಕೆ ಟ್ಯಾಂಕರ್ ತೆರಳಿದ್ದು, ಸದ್ಯಕ್ಕೆ ಕುಡಿಯುವ ನೀರಿನ ಸಮಸ್ಯೆಗೆ ತಾತ್ಕಾಲಿಕ ಪರಿಹಾರ ದೊರೆತಂತಾಗಿದೆ.

ಶಾಶ್ವತ ಪರಿಹಾರಕ್ಕೆ ಒತ್ತಾಯ:

ಮಾರೇನಹಳ್ಳಿಯಲ್ಲಿ ಪದೇಪದೇ ಕುಡಿಯುವ ನೀರಿನ ಸಮಸ್ಯೆ ಎದುರಾಗುತ್ತಿರುವುದರಿಂದ ಟ್ಯಾಂಕರ್ ನೀರಿನ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಿ ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು. ಜೊತೆಗೆ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಿದ ಬಿಲ್‌ಗಳನ್ನು ಕಾಲಮಿತಿಯಲ್ಲಿ ಪಾವತಿಸುವ ಮೂಲಕ ಸರಬರಾಜು ವ್ಯತ್ಯಯವಾಗದಂತೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಈ ವೇಳೆ ಟ್ಯಾಂಕರ್ ನೀರು ಸರಬರಾಜುದಾರರು ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಉಪಸ್ಥಿತರಿದ್ದರು.

ಬರ ನಿರ್ವಹಣೆಯಲ್ಲಿ ಹಗಲಿರುಳು ಕೆಲಸ ಮಾಡಬೇಕು: ತಹಶೀಲ್ದಾರ್ ಗುರುಬಸವರಾಜ್

"ಮುಂಜಾನೆಯ ಮೆರಗು"

ಜಗಳೂರು ಅ, 04– ತಾಲೂಕಿನಲ್ಲಿ ತೀವ್ರ ಬರ ಪರಿಸ್ಥಿತಿ ಎದುರಾಗುತ್ತಿರುವ ಹಿನ್ನೆಲೆಯಲ್ಲಿ ಕುಡಿಯುವ ನೀರು, ಕೃಷಿ, ಜಾನುವಾರುಗಳಿಗೆ ಮೇವು ಸೇರಿದಂತೆ ಬರ ನಿರ್ವಹಣಾ ಕಾರ್ಯಗಳನ್ನು ತಾಲೂಕು ಮಟ್ಟದ ಅಧಿಕಾರಿಗಳು ಸಮರ್ಪಕವಾಗಿ ನಿಭಾಯಿಸಬೇಕು ಎಂದು ತಹಶೀಲ್ದಾರ್ ಗುರುಬಸವರಾಜ್ ಅಧಿಕಾರಿಗಳಿಗೆ ಸೂಚಿಸಿದರು.

ಪಟ್ಟಣದ ತಾಲೂಕು ಕಚೇರಿಯಲ್ಲಿ ಶನಿವಾರ ಹಮ್ಮಿಕೊಂಡಿದ್ದ ಬರ ನಿರ್ವಹಣಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ತಾಲೂಕಿನಲ್ಲಿ ಕಂಡು ಕೇಳರಿಯದ ರೀತಿಯಲ್ಲಿಬರಪರಿಸ್ಥಿತಿಉಲ್ಬಣವಾಗುತ್ತಿದ್ದು, ಗ್ರಾಮಾಡಳಿತಾಧಿಕಾರಿಗಳು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಸೇರಿದಂತೆ ತಾಲೂಕು ಮಟ್ಟದ ಎಲ್ಲ ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿದ್ದು, ತಮ್ಮ ವ್ಯಾಪ್ತಿಯ ಗ್ರಾಮಗಳ ವಾಸ್ತವ ಸ್ಥಿತಿಯನ್ನು ನಿರಂತರವಾಗಿ ಪರಿಶೀಲಿಸಬೇಕು. ಯಾವುದೇ ಸಮಸ್ಯೆ ಎದುರಾದಾಗ ಮೇಲಧಿಕಾರಿಗಳ ಗಮನಕ್ಕೆ ತಂದು ತಕ್ಷಣ ಪರಿಹಾರ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

50ಕ್ಕೂ ಅಧಿಕ ಗ್ರಾಮಗಳಲ್ಲಿ ನೀರಿನ ಸಮಸ್ಯೆ ಸಾಧ್ಯತೆ

ಸಭೆಯಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಸಾಧಿಕ್ ವುಲ್ಲಾ ಅವರಿಂದ ತಾಲೂಕಿನಲ್ಲಿ ಕುಡಿಯುವ ನೀರಿನ ಸ್ಥಿತಿಗತಿ ಕುರಿತು ತಹಶೀಲ್ದಾರ್ ಮಾಹಿತಿ ಪಡೆದರು.

ಈ ವೇಳೆ ಅವರು, ತಾಲೂಕಿನ 50ಕ್ಕೂ ಅಧಿಕ ಗ್ರಾಮಗಳಲ್ಲಿ ಮುಂದಿನ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗುವ ಸಾಧ್ಯತೆ ಗುರುತಿಸಲಾಗಿದೆ. ಈಗಾಗಲೇ ಕಲ್ಲೇದೇವರಪುರ, ಮರೇನಹಳ್ಳಿ ಹಾಗೂ ಹುಚ್ಚಂಗಿಪುರ ಗ್ರಾಮಗಳಲ್ಲಿ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ ಎಂದು ತಿಳಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ತಹಶೀಲ್ದಾರ್, ನೀರಿನ ಸಮಸ್ಯೆ ಇರುವ ಗ್ರಾಮಗಳಿಗೆ ಮುನ್ನೆಚ್ಚರಿಕಾ ಕ್ರಮವಾಗಿ ಭೇಟಿ ನೀಡಿ ವಾಸ್ತವ ಸ್ಥಿತಿಯನ್ನು ಪರಿಶೀಲಿಸಬೇಕು. ಖಾಸಗಿ ಕೊಳವೆಬಾವಿಗಳಲ್ಲಿ ನೀರು ಲಭ್ಯವಿದ್ದರೆ ಅವುಗಳನ್ನು ಬಾಡಿಗೆಗೆ ಪಡೆದು ನೀರು ಸರಬರಾಜು ಮಾಡುವ ಸಾಧ್ಯತೆ ಪರಿಶೀಲಿಸಬೇಕು. ಈ ವ್ಯವಸ್ಥೆಯಿಂದ ಸಮಸ್ಯೆ ಬಗೆಹರಿಯದ ಗ್ರಾಮಗಳಲ್ಲಿ ಮಾತ್ರ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲು ಟೆಂಡರ್ ಪ್ರಕ್ರಿಯೆ ಕೈಗೊಳ್ಳಬೇಕು ಎಂದು ಸೂಚಿಸಿದರು.



ಅಲ್ಲದೆ, ಕುಡಿಯುವ ನೀರಿನ ಜೊತೆಗೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆಯನ್ನೂ ಖಾತರಿಪಡಿಸಬೇಕು. ನೀರಿನ ಮೂಲಗಳು ಬತ್ತುವ ಮುನ್ನವೇ ಪರ್ಯಾಯ ವ್ಯವಸ್ಥೆ ರೂಪಿಸಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

ಗ್ರಾಮಗಳ ವಾಸ್ತವ ಸ್ಥಿತಿ ಅರಿತು ವರದಿ ನೀಡಿ

ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಕೆಂಚಪ್ಪ ಮಾತನಾಡಿ, ತಾಲೂಕಿನ 22 ಗ್ರಾಮ ಪಂಚಾಯಿತಿಗಳ ಪಿಡಿಓಗಳು ತಮ್ಮ ಕೇಂದ್ರ ಸ್ಥಾನದಲ್ಲಿದ್ದು, ಗ್ರಾಮಗಳ ವಾಸ್ತವ ಪರಿಸ್ಥಿತಿಯನ್ನು ಅರಿತು ಮೇಲಧಿಕಾರಿಗಳಿಗೆ ವರದಿ ನೀಡಬೇಕು. ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿದ್ದು ಜನರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಿದರೆ ಸಾರ್ವಜನಿಕರಿಗೆ ಅನುಕೂಲವಾಗಲಿದೆ ಎಂದರು.

ಪ್ರತಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಕುಡಿಯುವ ನೀರಿನ ಮೂಲಗಳು, ಬೋರ್‌ವೆಲ್‌ಗಳ ಸ್ಥಿತಿ, ಟ್ಯಾಂಕರ್ ಅಗತ್ಯವಿರುವ ಗ್ರಾಮಗಳು ಹಾಗೂ ಪರ್ಯಾಯ ನೀರಿನ ಮೂಲಗಳ ಕುರಿತು ಸಮಗ್ರ ಮಾಹಿತಿ ಸಂಗ್ರಹಿಸಬೇಕು ಎಂದು ಸೂಚಿಸಿದರು.

40 ಸಾವಿರ ಹೆಕ್ಟೇರ್‌ಗೂ ಅಧಿಕ ಬೆಳೆ ನಷ್ಟ

ಕೃಷಿ ಇಲಾಖೆಯ ಸಹಾಯಕ ನಿರ್ದೇಶಕಿ ಶ

ದುಶ್ಚಟಗಳಿಂದ ದೂರವಿದ್ದು ಆರೋಗ್ಯಕರ ಜೀವನ ನಡೆಸಿ: ಶಾಸಕ ಬಿ.ಪಿ.ಹರೀಶ್

"ಮುಂಜಾನೆಯ ಮೆರಗು"

ಹರಿಹರ ಅ, 04– ದುಶ್ಚಟಗಳಿಂದ ದೂರವಿದ್ದು ಆರೋಗ್ಯಕರ ಜೀವನ ನಡೆಸುವ ಮೂಲಕ ಕುಟುಂಬದ ನೆಮ್ಮದಿ ಹಾಗೂ ಸಮಾಜದ ಸ್ವಾಸ್ಥ್ಯ ಕಾಪಾಡಬೇಕು ಎಂದು ಶಾಸಕ ಬಿ.ಪಿ.ಹರೀಶ್ ಕರೆ ನೀಡಿದರು.

ನಗರದ ಗುರುಭವನದಲ್ಲಿ ಇಂದು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ್ ಹರಿಹರ ಮತ್ತು ಮಲೇಬೆನ್ನೂರು, ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ ಟ್ರಸ್ಟ್ ಬೆಳ್ತಂಗಡಿ, ಅಖಿಲ ಕರ್ನಾಟಕ ಜಿಲ್ಲಾ ಜನಜಾಗೃತಿ ವೇದಿಕೆ ಟ್ರಸ್ಟ್ ದಾವಣಗೆರೆ ಜಿಲ್ಲೆ ಹಾಗೂ ಸನಾತನ ಸಿಂಧು ಸಂಸ್ಥೆ ಹರಿಹರ ಇವರ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ 'ಗಾಂಧಿ ಸ್ಮೃತಿ ಮತ್ತು ನವಜೀವನ ಸಮಿತಿ ಸಮಾವೇಶ' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶ್ರೀ ರಾಮಕೃಷ್ಣ ವಿವೇಕಾನಂದ ಆಶ್ರಮದ ಅಧ್ಯಕ್ಷರಾದ ಶ್ರೀ ಆತ್ಮದೀಪಾನಂದ ಜೀ ಮಹಾರಾಜ್ ಅವರ ದಿವ್ಯ ಸಾನ್ನಿಧ್ಯದಲ್ಲಿ ನಡೆದ ಕಾರ್ಯಕ್ರಮದಲ್ಲಿ, ಶಾಸಕ



ಬಿ.ಪಿ.ಹರೀಶ್ ಅವರು ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಿ ಗೌರವಿಸಿದರು.

ಕಾರ್ಯಕ್ರಮದ ಅಂಗವಾಗಿ ದುಶ್ಚಟಗಳಿಂದ ಮುಕ್ತರಾಗಿ ನವಜೀವನ ನಡೆಸುತ್ತಿರುವವರನ್ನು ಗುಲಾಬಿ ಹೂವು ನೀಡುವ ಮೂಲಕ ಗೌರವಿಸಲಾಯಿತು. ಈ ಮೂಲಕ ದುಶ್ಚಟಗಳಿಂದ ದೂರವಿದ್ದು ಉತ್ತಮ ಜೀವನಶೈಲಿ ಅಳವಡಿಸಿಕೊಳ್ಳುವಂತೆ ಜಾಗೃತಿ ಮೂಡಿಸಲಾಯಿತು.

ದುಶ್ಚಟಗಳು ವ್ಯಕ್ತಿಯ ಆರೋಗ್ಯದ ಮೇಲೆ ಮಾತ್ರವಲ್ಲದೆ ಕುಟುಂಬದ ಆರ್ಥಿಕ ಸ್ಥಿತಿ, ಸಾಮಾಜಿಕ ಗೌರವ ಹಾಗೂ ನೆಮ್ಮದಿಯ ಮೇಲೂ ಪರಿಣಾಮ ಬೀರುತ್ತವೆ. ಆದ್ದರಿಂದ ಪ್ರತಿಯೊಬ್ಬರೂ ದುಶ್ಚಟಗಳಿಂದ ದೂರವಿದ್ದು, ಉತ್ತಮ ಹವ್ಯಾಸಗಳನ್ನು ಬೆಳೆಸಿಕೊಳ್ಳಬೇಕು. ಸಮಾಜದಲ್ಲಿ ವ್ಯಸನಮುಕ್ತ ವಾತಾವರಣ ನಿರ್ಮಿಸಲು ಜನಜಾಗೃತಿ ಕಾರ್ಯಕ್ರಮಗಳು ಸಹಕಾರಿಯಾಗುತ್ತವೆ ಎಂಬ ಸಂದೇಶವನ್ನು ಸಮಾವೇಶದಲ್ಲಿ ಸಾರಲಾಯಿತು.

ಕಾರ್ಯಕ್ರಮದಲ್ಲಿ ಹರಿಹರದ ಉದ್ಯಮಿ ಹೆಚ್.ಪಿ.ಬಸವರಾಜ್, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಘದ ದಾವಣಗೆರೆ ಜಿಲ್ಲಾ ನಿರ್ದೇಶಕ ಎಂ.ಲಕ್ಷ್ಮಣ್, ಹರಿಹರದ ಸನಾತನ ಸಿಂಧು ಸಂಸ್ಥೆಯ ಡಾ.ಆರ್.ಆರ್.ಕಮೀತ್ಕರ್, ಶಿವಮೊಗ್ಗ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ (ಮಕ್ಕಳ ವಿಶೇಷ ನ್ಯಾಯಪೀಠ) ಅಧ್ಯಕ್ಷ ತಾಜುದ್ದೀನ್ ಖಾನ್, ಜಿಲ್ಲಾ ಜನಜಾಗೃತಿ ವೇದಿಕೆಯ ಸದಸ್ಯರಾದ ಎ.ಪದ್ಮರಾಜ್, ಜಿ.ಮಂಜುನಾಥ ಪಟೇಲ್, ಜಿ.ಬಿ.ಹಾಲೇಶಗೌಡ್ರು, ಜಿ.ಎಸ್.ರವಿಶಂಕರ್, ರಾಜಶೇಖರ್ ಕೊಂಡಜ್ಜಿ, ಜಿಗಳಿ ಪ್ರಕಾಶ್, ರೂಪಾ ಪಾಟೀಲ್, ಹನುಮಂತರಾಯ, ಎಕ್ಕೆಗೊಂದಿ ಹೆಚ್.ಬಿ.ರುದ್ರಗೌಡ್ರು, ರಾಮಾಂಜನೇಯ ಸೇರಿದಂತೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಸದಸ್ಯರು ಉಪಸ್ಥಿತರಿದ್ದರು.

ದಾವಣಗೆರೆಯಲ್ಲಿ ಹಿಂದೂ ಮಹಾ ಗಣಪತಿಯ ಭವ್ಯ ಶೋಭಾಯಾತ್ರೆ: ಶಾಸಕ ಸಮರ್ಥ್ ಶಾಮನೂರು ಭಾಗಿ

"ಮುಂಜಾನೆಯ ಮೆರಗು"

ದಾವಣಗೆರೆ ಅ, 04– ನಗರದ ಹಿಂದೂ ಮಹಾ ಗಣಪತಿಯ ಭವ್ಯ ಶೋಭಾಯಾತ್ರೆಯಲ್ಲಿ ಶಾಸಕ ಸಮರ್ಥ್ ಶಾಮನೂರು ಭಾಗವಹಿಸಿ, ಅಪಾರ ಸಂಖ್ಯೆಯಲ್ಲಿ ನೆರೆದಿದ್ದ ಭಕ್ತರು ಹಾಗೂ ಸಾರ್ವಜನಿಕರೊಂದಿಗೆ ಗಣೇಶೋತ್ಸವದ ಸಂಭ್ರಮದಲ್ಲಿ ಪಾಲ್ಗೊಂಡರು.



ನಗರದಲ್ಲಿ ಭಕ್ತಿಭಾವ ಮತ್ತು ಸಡಗರದಿಂದ ನಡೆದ ಶೋಭಾಯಾತ್ರೆಯಲ್ಲಿ ಮಂಗಳವಾದ್ಯಗಳ ನಾದ, ಗಣಪತಿ ಬಪ್ಪಾ ಮೋರಿಯಾ ಘೋಷಣೆಗಳು ಹಾಗೂ ಭಕ್ತರ ಉತ್ಸಾಹದ ನಡುವೆ ಹಬ್ಬದ ವಾತಾವರಣ ಮನೆಮಾಡಿತ್ತು. ಈ ಸಂದರ್ಭದಲ್ಲಿ ಶಾಸಕ ಸಮರ್ಥ್ ಶಾಮನೂರು ಅವರು ಶ್ರೀ ಗಣೇಶನಿಗೆ ಭಕ್ತಿಪೂರ್ವಕವಾಗಿ ನಮನ ಸಲ್ಲಿಸಿ, ಶೋಭಾಯಾತ್ರೆಯಲ್ಲಿ ಪಾಲ್ಗೊಂಡ ಭಕ್ತರು ಮತ್ತು ಸಾರ್ವಜನಿಕರೊಂದಿಗೆ ಆತ್ಮೀಯವಾಗಿ ಬೆರೆತು ಸಂಭ್ರಮ ಹಂಚಿಕೊಂಡರು.

ನಂತರ ಮಾತನಾಡಿದ ಅವರು, ಗಣೇಶೋತ್ಸವವು ಭಕ್ತಿ, ಶ್ರದ್ಧೆ ಹಾಗೂ ಸಾಮರಸ್ಯದ ಸಂಕೇತವಾಗಿದೆ. ಇಂತಹ ಧಾರ್ಮಿಕ ಆಚರಣೆಗಳು ಜನರಲ್ಲಿ ಪರಸ್ಪರ ಪ್ರೀತಿ, ಸಹೋದರತ್ವ ಮತ್ತು ಒಗ್ಗಟ್ಟಿನ ಭಾವನೆಯನ್ನು ವೃದ್ಧಿಸುತ್ತವೆ ಎಂದು ತಿಳಿಸಿದರು.

ಶೋಭಾಯಾತ್ರೆಯುದ್ದಕ್ಕೂ ಭಕ್ತರು ಉತ್ಸಾಹದಿಂದ ಪಾಲ್ಗೊಂಡಿದ್ದು, ವಿವಿಧೆಡೆ ಗಣೇಶನಿಗೆ ಪೂಜೆ ಸಲ್ಲಿಸಿ ಭಕ್ತಿಭಾವ ಮೆರೆದರು. ನಗರದ ಪ್ರಮುಖ ರಸ್ತೆಗಳಲ್ಲಿ ಸಾಗಿದ ಶೋಭಾಯಾತ್ರೆ ಗಣೇಶೋತ್ಸವದ ಸಂಭ್ರಮವನ್ನು ಮತ್ತಷ್ಟು ಹೆಚ್ಚಿಸಿತು.

ಈ ಸಂದರ್ಭದಲ್ಲಿ ಹಿಂದೂ ಮಹಾ ಗಣಪತಿ ಸಮಿತಿಯ ಪದಾಧಿಕಾರಿಗಳು, ವಿವಿಧ ಸಂಘ–ಸಂಸ್ಥೆಗಳ ಮುಖಂಡರು, ಕಾರ್ಯಕರ್ತರು ಹಾಗೂ ಅಪಾರ ಸಂಖ್ಯೆಯ ಭಕ್ತಾದಿಗಳು ಉಪಸ್ಥಿತರಿದ್ದರು.

ಮಹರ್ಷಿ ವಾಲ್ಮೀಕಿ ತಪೋವನ ಅಭಿವೃದ್ಧಿಗೆ ಸಚಿವ ಟಿ.ರಘುಮೂರ್ತಿ ಮಹತ್ವದ ಹೆಜ್ಜೆ

"ಮುಂಜಾನೆಯ ಮೆರಗು"

ಬೆಂಗಳೂರು ಅ, 04– ಶಾಸಕರ ಭವನದ ಮುಂಭಾಗದಲ್ಲಿರುವ ಮಹರ್ಷಿ ವಾಲ್ಮೀಕಿ ಪ್ರತಿಮೆ ಇರುವ ಸುಮಾರು ಎರಡು ಎಕರೆ ಪ್ರದೇಶವನ್ನು 'ತಪೋವನ' ಮಾದರಿಯಲ್ಲಿ ಅಭಿವೃದ್ಧಿಪಡಿಸಲು ಸಚಿವ ಟಿ.ರಘುಮೂರ್ತಿ ಮಹತ್ವದ ಹೆಜ್ಜೆ ಇಟ್ಟಿದ್ದಾರೆ.

ಈ ಸಂಬಂಧ ಸಚಿವರು ಇಂದು ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಉದ್ದೇಶಿತ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮಹರ್ಷಿ ವಾಲ್ಮೀಕಿ ಅವರ ಜೀವನ, ತತ್ವಾದರ್ಶಗಳು ಹಾಗೂ ರಾಮಾಯಣದ ಸಾಂಸ್ಕೃತಿಕ ಮಹತ್ವವನ್ನು ಪ್ರತಿಬಿಂಬಿಸುವ ರೀತಿಯಲ್ಲಿ ಈ ಪ್ರದೇಶವನ್ನು ಅಭಿವೃದ್ಧಿಪಡಿಸುವ ಕುರಿತು ಅಧಿಕಾರಿಗಳೊಂದಿಗೆ ಚರ್ಚಿಸಿದರು.

ತಪೋವನದಲ್ಲಿ ವಾಲ್ಮೀಕಿ–ರಾಮಾಯಣ ಪರಿಕಲ್ಪನೆಯ ಕಲ್ಲಿನ ಕೆತ್ತನೆಗಳು, ಆಕರ್ಷಕ ಉದ್ಯಾನವನ, ಸುಂದರ ಲ್ಯಾಂಡ್‌ಸ್ಕೇಪ್, ದೀಪಾಲಂಕಾರ ಹಾಗೂ ದ್ವನಿವರ್ಧಕ ವ್ಯವಸ್ಥೆ ಸೇರಿದಂತೆ ವಿವಿಧ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ. ಈ ಮೂಲಕ ಸ್ಥಳವನ್ನು ಸಾಂಸ್ಕೃತಿಕ ಹಾಗೂ ಪ್ರವಾಸಿ ಆಕರ್ಷಣೆಯ ಕೇಂದ್ರವನ್ನಾಗಿ ರೂಪಿಸುವ ಯೋಜನೆ ರೂಪಿಸಲಾಗಿದೆ.

ಹಂಪಿಯ ಪ್ರಸಿದ್ಧ ಹಜಾರ ರಾಮಸ್ವಾಮಿ ದೇಗುಲದ ಕಲಾತ್ಮಕ ವಿನ್ಯಾಸ ಹಾಗೂ ಶಿಲ್ಪಕಲೆಯ ಮಾದರಿಯನ್ನು ಗಮನದಲ್ಲಿಟ್ಟುಕೊಂಡು ತಪೋವನವನ್ನು ಅಭಿವೃದ್ಧಿಪಡಿಸಲು ಸಮಗ್ರ ಯೋಜನಾ ವರದಿ (ಡಿಪಿಆರ್) ಸಿದ್ಧಪಡಿಸುವಂತೆ ಸಚಿವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಅಲ್ಲದೆ, ಈ ಪ್ರದೇಶವನ್ನು ಸಾರ್ವಜನಿಕರ ವೀಕ್ಷಣೆಗೆ ಮುಕ್ತಗೊಳಿಸುವ ಸಾಧ್ಯತೆಗಳ ಬಗ್ಗೆಯೂ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಲಾಗಿದ್ದು, ಈ ಕುರಿತು ಶೀಘ್ರದಲ್ಲೇ ನಿರ್ಧಾರ ಕೈಗೊಳ್ಳಲಾಗುವುದು ಎಂದು ತಿಳಿಸಲಾಗಿದೆ.

ಮಹರ್ಷಿ ವಾಲ್ಮೀಕಿಯ ಪರಂಪರೆ, ರಾಮಾಯಣದ ಮೌಲ್ಯಗಳು ಹಾಗೂ ನಾಡಿನ ಸಾಂಸ್ಕೃತಿಕ ವೈಭವವನ್ನು ಪ್ರತಿಬಿಂಬಿಸುವ 'ತಪೋವನ'



ನಿರ್ಮಾಣಕ್ಕೆ ಬದ್ಧರಾಗಿರುವುದಾಗಿ ಸಚಿವ ಟಿ.ರಘುಮೂರ್ತಿ ತಿಳಿಸಿದ್ದಾರೆ.

ಈ ಯೋಜನೆ ಅನುಷ್ಠಾನಗೊಂಡಲ್ಲಿ ಬೆಂಗಳೂರು ಹೃದಯಭಾಗದಲ್ಲಿರುವ ಮಹರ್ಷಿ ವಾಲ್ಮೀಕಿ ಪ್ರತಿಮೆ ಸುತ್ತಮುತ್ತಲಿನ ಪ್ರದೇಶವು ಸಾಂಸ್ಕೃತಿಕ ಮಹತ್ವ ಹೊಂದಿರುವ ಸುಂದರ ತಾಣವಾಗಿ ರೂಪುಗೊಳ್ಳುವ ನಿರೀಕ್ಷೆಯಿದೆ.

ವಾಲ್ಮೀಕಿ ಗುರುಪೀಠಕ್ಕೆ ಸಚಿವ ಕೆ.ಎಸ್. ಬಸವಂತಪ್ಪ ಭೇಟಿ: ಶ್ರೀ ಪ್ರಸನ್ನಾನಂದಪುರಿ ಸ್ವಾಮೀಜಿಗಳ ಆಶೀರ್ವಾದ ಪಡೆದ ಸಚಿವರು

"ಮುಂಜಾನೆಯ ಮೆರಗು"

ಹರಿಹರ ಅ, 04– ದಾವಣಗೆರೆ ಜಿಲ್ಲೆಯ ಹರಿಹರ ತಾಲ್ಲೂಕಿನ ರಾಜನಹಳ್ಳಿ ಗ್ರಾಮದಲ್ಲಿರುವ ಶ್ರೀ ವಾಲ್ಮೀಕಿ ಗುರುಪೀಠಕ್ಕೆ ಸಚಿವ ಕೆ.ಎಸ್. ಬಸವಂತಪ್ಪ ಅವರು ಇಂದು ಭೇಟಿ ನೀಡಿ, ಪೀಠದ ಪರಮಪೂಜ್ಯ ಜಗದ್ಗುರು ಶ್ರೀ ಶ್ರೀ ಶ್ರೀ ಪ್ರಸನ್ನಾನಂದಪುರಿ ಮಹಾಸ್ವಾಮಿಗಳ ಆಶೀರ್ವಾದ ಪಡೆದರು.



ಗುರುಪೀಠಕ್ಕೆ ಆಗಮಿಸಿದ ಸಚಿವರು ಶ್ರೀಗಳ ಪಾದಕಮಲಗಳಿಗೆ ನಮಸ್ಕರಿಸಿ ಗೌರವ ಸಲ್ಲಿಸಿದರು. ಬಳಿಕ ಶ್ರೀಗಳೊಂದಿಗೆ ಕೆಲಕಾಲ ಆತ್ಮೀಯವಾಗಿ ಮಾತುಕತೆ ನಡೆಸಿದರು.

ಈ ಸಂದರ್ಭದಲ್ಲಿ ಧಾರ್ಮಿಕ, ಶೈಕ್ಷಣಿಕ ಹಾಗೂ ಸಾಮಾಜಿಕ ಕ್ಷೇತ್ರಗಳಲ್ಲಿ ವಾಲ್ಮೀಕಿ ಗುರುಪೀಠವು ಸಲ್ಲಿಸುತ್ತಿರುವ ಕೊಡುಗೆಯನ್ನು ಸ್ಮರಿಸಿದ ಸಚಿವರು, ಸಮಾಜದಲ್ಲಿ ಸಮಾನತೆ, ಮಾನವೀಯ ಮೌಲ್ಯಗಳು ಹಾಗೂ ಶಿಕ್ಷಣದ ಮಹತ್ವವನ್ನು ಸಾರುವ ಶ್ರೀಗಳ ಮಾರ್ಗದರ್ಶನ ಎಲ್ಲರಿಗೂ ಪ್ರೇರಣೆಯಾಗಿದೆ ಎಂದು ಅಭಿಪ್ರಾಯಪಟ್ಟರು.

ಸಮಾಜದ ಏಳಿಗೆಗಾಗಿ ಧಾರ್ಮಿಕ ಮತ್ತು ಶೈಕ್ಷಣಿಕ ಜಾಗೃತಿ ಮೂಡಿಸುವುದರ ಜೊತೆಗೆ ಮಾನವೀಯ ಮೌಲ್ಯಗಳನ್ನು ಬೆಳೆಸುವಲ್ಲಿ ಪೂಜ್ಯರ ಸೇವೆ ಮಹತ್ವದ್ದಾಗಿದೆ. ಶ್ರೀಗಳ ಆದರ್ಶಗಳು ಸಮಾಜದ ಎಲ್ಲ ವರ್ಗಗಳ ಜನರಿಗೆ ಸದಾ ಮಾರ್ಗದರ್ಶನ ನೀಡುತ್ತವೆ ಎಂದು ತಿಳಿಸಿದರು.

ಶ್ರೀಗಳ ಆಶೀರ್ವಾದ ಪಡೆದು, ಅವರೊಂದಿಗೆ ಆತ್ಮೀಯವಾಗಿ ಸಮಾಲೋಚನೆ ನಡೆಸಿದ ಸಚಿವರ ಭೇಟಿಯು ಧಾರ್ಮಿಕ ಮತ್ತು ಸಾಮಾಜಿಕ ಮೌಲ್ಯಗಳ ಮಹತ್ವವನ್ನು ಪ್ರತಿಬಿಂಬಿಸಿತು.

ಮೈಸೂರು ದಸರಾ ನಾಡಕುಸ್ತಿ ಜೋಡಿ ಕಟ್ಟುವ ಕಾರ್ಯಕ್ರಮಕ್ಕೆ ಸಚಿವ ಯತೀಂದ್ರ ಸಿದ್ದರಾಮಯ್ಯ ಚಾಲನೆ

"ಮುಂಜಾನೆಯ ಮೆರಗು"

ಮೈಸೂರು ಅ, 04– ನಾಡಹಬ್ಬ ಮೈಸೂರು ದಸರಾ ಮಹೋತ್ಸವದ ಪ್ರಮುಖ ಆಕರ್ಷಣೆಗಳಲ್ಲಿ ಒಂದಾದ 'ದಸರಾ ನಾಡಕುಸ್ತಿ' ಪಂದ್ಯಾವಳಿಯ ಸಾಂಪ್ರದಾಯಿಕ ಜೋಡಿ ಕಟ್ಟುವ ಕಾರ್ಯಕ್ರಮಕ್ಕೆ ಸಚಿವ ಯತೀಂದ್ರ ಸಿದ್ದರಾಮಯ್ಯ ಅವರು ಚಾಲನೆ ನೀಡಿದರು.

ನಗರದ ಡಿ. ದೇವರಾಜ ಅರಸು ವಿವಿಧೋದ್ದೇಶ ಕ್ರೀಡಾಂಗಣದಲ್ಲಿ ಇಂದು ನಡೆದ ಕಾರ್ಯಕ್ರಮದಲ್ಲಿ 2026ರ ದಸರಾ ಕುಸ್ತಿ ಪಂದ್ಯಾವಳಿಯ ಪೋಸ್ಟರ್ ಬಿಡುಗಡೆಗೊಳಿಸಿ, ಕುಸ್ತಿ ಪಂದ್ಯಾವಳಿಗೆ ಅಧಿಕೃತವಾಗಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಯತೀಂದ್ರ ಸಿದ್ದರಾಮಯ್ಯ, ಕುಸ್ತಿ ನಮ್ಮ ಮಣ್ಣಿನ ಸಾಂಪ್ರದಾಯಿಕ ಕ್ರೀಡೆಯಾಗಿದ್ದು, ಮೈಸೂರು ದಸರೆಯ ಸಾಂಸ್ಕೃತಿಕ ಪರಂಪರೆಯೊಂದಿಗೆ ಅವಿನಾಭಾವ ಸಂಬಂಧ ಹೊಂದಿದೆ. ದಸರಾ ಮಹೋತ್ಸವದ ಸಂದರ್ಭದಲ್ಲಿ ನಡೆಯುವ ನಾಡಕುಸ್ತಿ ಪಂದ್ಯಾವಳಿಯು ನಾಡಿನ ಕ್ರೀಡಾ ಪರಂಪರೆಯನ್ನು ಉಳಿಸಿ ಬೆಳೆಸುವಲ್ಲಿ ಮಹತ್ವದ ಪಾತ್ರ ವಹಿಸುತ್ತದೆ ಎಂದು ತಿಳಿಸಿದರು.

ಕುಸ್ತಿಪಟುಗಳಿಗೆ ಸೂಕ್ತ ವೇದಿಕೆ ಕಲ್ಪಿಸುವುದು, ಅವರ ಪ್ರತಿಭೆಯನ್ನು ಗುರುತಿಸುವುದು ಹಾಗೂ ಕ್ರೀಡೆಯಲ್ಲಿ



ಮತ್ತಷ್ಟು ಸಾಧನೆ ಮಾಡಲು ಪ್ರೋತ್ಸಾಹ ನೀಡುವುದು ಈ ಪಂದ್ಯಾವಳಿಯ ಮುಖ್ಯ ಉದ್ದೇಶವಾಗಿದೆ. ಕ್ರೀಡಾಕೂಟದಲ್ಲಿ ಸೋಲು–ಗೆಲುವಿಗಿಂತ ಭಾಗವಹಿಸುವಿಕೆ, ಕ್ರೀಡಾಸ್ಫೂರ್ತಿ ಮತ್ತು ಪರಸ್ಪರ ಗೌರವಕ್ಕೆ ಹೆಚ್ಚಿನ ಮಹತ್ವವಿದೆ. ಪಂದ್ಯಾವಳಿಯಲ್ಲಿ ಭಾಗವಹಿಸುತ್ತಿರುವ ಎಲ್ಲ ಕುಸ್ತಿಪಟುಗಳು ಉತ್ತಮ ಪ್ರದರ್ಶನ ನೀಡಲಿ ಎಂದು ಶುಭ ಹಾರೈಸಿ, ಎಲ್ಲರಿಗೂ ಅಭಿನಂದನೆ ಸಲ್ಲಿಸಿದರು.

ಮೈಸೂರು ದಸರಾ ನಾಡಕುಸ್ತಿ ಪಂದ್ಯಾವಳಿಯು ಪ್ರತಿವರ್ಷ ಕುಸ್ತಿ ಪ್ರೇಮಿಗಳು ಹಾಗೂ ಸಾರ್ವಜನಿಕರ ಗಮನ ಸೆಳೆಯುತ್ತದೆ. ಸಾಂಪ್ರದಾಯಿಕ ಕುಸ್ತಿ ಕಲೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವುದರ ಜತೆಗೆ ಗ್ರಾಮೀಣ ಕ್ರೀಡಾಪಟುಗಳಿಗೆ ತಮ್ಮ ಸಾಮರ್ಥ್ಯ ಪ್ರದರ್ಶಿಸಲು ಈ ಪಂದ್ಯಾವಳಿ ಉತ್ತಮ ಅವಕಾಶ ಒದಗಿಸುತ್ತದೆ.

ಕಾರ್ಯಕ್ರಮದಲ್ಲಿ ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಶಾಸಕ ಟಿ.ಎಸ್. ಶ್ರೀವತ್ಸ, ಮೈಸೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಅಪರ ಪೊಲೀಸ್ ವರಿಷ್ಠಾಧಿಕಾರಿ ನಾಗೇಶ್, ದಸರಾ ಕುಸ್ತಿ ಸಮಿತಿ ಕಾರ್ಯಾಧ್ಯಕ್ಷ ಧರ್ಮೇಂದ್ರ, ಕಾರ್ಯದರ್ಶಿ ನರಸಿಂಹಮೂರ್ತಿ ಸೇರಿದಂತೆ ಹಿರಿಯರು, ಅಧಿಕಾರಿಗಳು ಹಾಗೂ ಕುಸ್ತಿಪಟುಗಳು ಉಪಸ್ಥಿತರಿದ್ದರು.



ಹರಿಹರ ನಗರದ ವಿವಿಧೆಡೆ ಶಾಸಕ ಬಿ.ಪಿ. ಹರೀಶ್ ಸ್ವಚ್ಛತಾ ಪರಿಶೀಲನೆ

"ಮುಂಜಾನೆಯ ಮೆರಗು"

ಹರಿಹರ ಅ, 04– ನಗರದ ಸ್ವಚ್ಛತೆ ಹಾಗೂ ನೈರ್ಮಲ್ಯಕ್ಕೆ ಆದ್ಯತೆ ನೀಡುವ ಉದ್ದೇಶದಿಂದ ಶಾಸಕ ಬಿ.ಪಿ. ಹರೀಶ್ ಅವರು ಇಂದು ಬೆಳಿಗ್ಗೆ ಹರಿಹರ ನಗರದ ಗಾಂಧಿನಗರದ ವಿವಿಧ ಪ್ರದೇಶಗಳಿಗೆ ಭೇಟಿ ನೀಡಿ ಸ್ವಚ್ಛತಾ ಕಾರ್ಯಗಳನ್ನು ಪರಿಶೀಲಿಸಿದರು.



ನಗರಸಭೆಯ ಹಿರಿಯ ಆರೋಗ್ಯ ನಿರೀಕ್ಷಕ ಮಂಜುನಾಥ್ ಅವರೊಂದಿಗೆ ವಿವಿಧೆಡೆ ಸಂಚರಿಸಿದ ಶಾಸಕರು, ಚರಂಡಿಗಳ ಸ್ವಚ್ಛತೆ ಹಾಗೂ ರಸ್ತೆ ಬದಿಗಳಲ್ಲಿ ಕಂಡುಬಂದ ಕಸದ ರಾಶಿಗಳನ್ನು ಗಮನಿಸಿದರು. ಕೆಲವೆಡೆ ಎಲ್ಲೆಂದರಲ್ಲಿ ಕಸ ಬಿದ್ದಿರುವುದನ್ನು ಕಂಡು ಅಸಮಾಧಾನ ವ್ಯಕ್ತಪಡಿಸಿದ ಅವರು, ತಕ್ಷಣವೇ ಕಸವನ್ನು ತೆರವುಗೊಳಿಸಿ, ಸ್ವಚ್ಛತಾ ಕಾರ್ಯ ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಸ್ವಚ್ಛತೆ ಕಾಪಾಡುವುದು ನಗರಸಭೆಯ ಪ್ರಮುಖ ಜವಾಬ್ದಾರಿಯಾಗಿದ್ದು, ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಚರಂಡಿಗಳನ್ನು ನಿಯಮಿತವಾಗಿ ಸ್ವಚ್ಛಗೊಳಿಸಬೇಕು. ರಸ್ತೆ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಕಸ ಸಂಗ್ರಹವಾಗದಂತೆ ಕ್ರಮವಹಿಸಬೇಕು. ಸ್ವಚ್ಛತಾ ಕಾರ್ಯಗಳಲ್ಲಿ ನಿರ್ಲಕ್ಷ್ಯ ವಹಿಸದೆ, ಸಾರ್ವಜನಿಕರ ಅಹವಾಲುಗಳಿಗೆ ತ್ವರಿತವಾಗಿ ಸ್ಪಂದಿಸಬೇಕು ಎಂದು ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಸೂಚನೆ ನೀಡಿದರು.

ನಗರದ ಸ್ವಚ್ಛತೆ ಕಾಪಾಡುವಲ್ಲಿ ಪೌರಕಾರ್ಮಿಕರು ಮತ್ತು ನಗರಸಭೆ ಸಿಬ್ಬಂದಿಯ ಪಾತ್ರ ಮಹತ್ವದ್ದಾಗಿದೆ. ಸಾರ್ವಜನಿಕರೂ ಸಹ ಕಸವನ್ನು ಎಲ್ಲೆಂದರಲ್ಲಿ ಎಸೆಯದೆ, ನಿಗದಿತ ಸ್ಥಳಗಳಲ್ಲಿ ಹಾಕುವ ಮೂಲಕ ಸ್ವಚ್ಛ ನಗರ ನಿರ್ಮಾಣಕ್ಕೆ ಸಹಕರಿಸಬೇಕು ಎಂಬ ಆಶಯ ವ್ಯಕ್ತವಾಯಿತು.

ಈ ಸಂದರ್ಭದಲ್ಲಿ ಸ್ಥಳೀಯ ಮುಖಂಡರು, ಪೌರಕಾರ್ಮಿಕರು ಹಾಗೂ ನಗರಸಭೆಯ ಸಿಬ್ಬಂದಿ ಉಪಸ್ಥಿತರಿದ್ದರು.

ರೈತ ಸ್ವಾಭಿಮಾನ ಯಾತ್ರೆ: ಬೆಳೆ ಹಾನಿ ವೀಕ್ಷಿಸಿ ರೈತರಿಗೆ ಧೈರ್ಯ ತುಂಬಿದ ನಿಖಿಲ್ ಕುಮಾರಸ್ವಾಮಿ

"ಮುಂಜಾನೆಯ ಮೆರಗು"

ಹರಿಹರ ಅ, 04– ರೈತರ ಸಮಸ್ಯೆಗಳನ್ನು ನೇರವಾಗಿ ಆಲಿಸಿ, ಕೃಷಿ ಕ್ಷೇತ್ರದಲ್ಲಿ ಎದುರಾಗುತ್ತಿರುವ ಸವಾಲುಗಳನ್ನು ಅರಿತುಕೊಳ್ಳುವ ಉದ್ದೇಶದಿಂದ ಹಮ್ಮಿಕೊಂಡಿರುವ ರೈತ ಸ್ವಾಭಿಮಾನ ಯಾತ್ರೆಯ ಅಂಗವಾಗಿ ಜೆಡಿಎಸ್ ಯುವ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರು ದಾವಣಗೆರೆ ಜಿಲ್ಲ

ಜನರ ಬಳಿಗೆ ಸರ್ಕಾರ: ಅಹವಾಲು ಆಲಿಸಿ ಪರಿಹಾರಕ್ಕೆ ಸಿಎಂ ಡಿ.ಕೆ. ಶಿವಕುಮಾರ್ ಸೂಚನೆ

"ಮುಂಜಾನೆಯ ಮೆರಗು"

ಪಿರಿಯಾಪಟ್ಟಣ ಅ, 04– ಜನರ ಸಮಸ್ಯೆಗಳಿಗೆ ನೇರವಾಗಿ ಸ್ಪಂದಿಸಿ, ಸರ್ಕಾರಿ ಸೇವೆಗಳನ್ನು ಜನರ ಮನೆಬಾಗಿಲಿಗೆ ತಲುಪಿಸುವ ಉದ್ದೇಶದಿಂದ ಮೈಸೂರಿನ ಪಿರಿಯಾಪಟ್ಟಣದಲ್ಲಿ ಆಯೋಜಿಸಿದ್ದ 'ಬಾಗಿಲಿಗೆ ಬಂತು ಸರ್ಕಾರ, ಸೇವೆಗೆ ಇರಲಿ ಸಹಕಾರ' ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಚಾಲನೆ ನೀಡಿದರು.

ಪ್ರಜಾಸೇವಾ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಕಾರ್ಯಕ್ರಮವನ್ನು ಉದ್ಘಾಟಿಸಿದ ಮುಖ್ಯಮಂತ್ರಿ, ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿ, ಅವರ ಸಮಸ್ಯೆಗಳನ್ನು ಆಲಿಸಿದರು. ಜನರು ತಮ್ಮ ವಿವಿಧ ಸಮಸ್ಯೆಗಳ ಪರಿಹಾರಕ್ಕಾಗಿ ಸರ್ಕಾರಿ ಕಚೇರಿಗಳಿಗೆ ಪದೇಪದೇ ಅಲೆದಾಡುವ ಪರಿಸ್ಥಿತಿಯನ್ನು ತಪ್ಪಿಸಿ, ಆಡಳಿತ ವ್ಯವಸ್ಥೆಯನ್ನು ಜನಸಾಮಾನ್ಯರಿಗೆ ಇನ್ನಷ್ಟು ಹತ್ತಿರವಾಗಿಸುವುದು ಇಂತಹ ಕಾರ್ಯಕ್ರಮಗಳ ಪ್ರಮುಖ ಉದ್ದೇಶವಾಗಿದೆ.

ಸಾರ್ವಜನಿಕರು ಸಲ್ಲಿಸುವ ಅಹವಾಲುಗಳನ್ನು ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಬೇಕು. ಜನರ ಸಮಸ್ಯೆಗಳಿಗೆ ಸ್ಪಂದಿಸಿ, ನಿಯಮಾನುಸಾರ ಪರಿಹಾರ



ಕಲ್ಪಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸರ್ಕಾರದ ವಿವಿಧ ಇಲಾಖೆಗಳ ಯೋಜನೆಗಳು ಹಾಗೂ ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ತಲುಪಬೇಕು. ಜನರು ಸರ್ಕಾರಿ ಸೇವೆಗಳನ್ನು ಪಡೆಯುವಲ್ಲಿ ಎದುರಿಸುವ ತೊಂದರೆಗಳನ್ನು ಗುರುತಿಸಿ, ಅವುಗಳಿಗೆ ಸೂಕ್ತ ಪರಿಹಾರ ಕಂಡುಕೊಳ್ಳುವ ಮೂಲಕ ಆಡಳಿತವನ್ನು ಹೆಚ್ಚು ಪರಿಣಾಮಕಾರಿಯಾಗಿಸಬೇಕು ಎಂಬ ಆಶಯದೊಂದಿಗೆ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಜನರ ಸಮಸ್ಯೆಗಳಿಗೆ ಸ್ಥಳದಲ್ಲಿಯೇ ಸ್ಪಂದನೆಗೆ ಆದ್ಯತೆ

ಸಾರ್ವಜನಿಕರ ಅಹವಾಲುಗಳನ್ನು ನೇರವಾಗಿ ಸ್ವೀಕರಿಸುವ ಇಂತಹ ಕಾರ್ಯಕ್ರಮಗಳು ಜನರು ಮತ್ತು ಆಡಳಿತ ವ್ಯವಸ್ಥೆಯ ನಡುವಿನ ಅಂತರವನ್ನು ಕಡಿಮೆ ಮಾಡಲು ಸಹಕಾರಿಯಾಗುತ್ತವೆ. ವಿವಿಧ ಇಲಾಖೆಗಳ ವ್ಯಾಪ್ತಿಗೆ ಬರುವ ಸಮಸ್ಯೆಗಳನ್ನು ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದು, ಅವುಗಳ ಪರಿಹಾರಕ್ಕೆ ಮುಂದಾಗಲು ಈ ವೇದಿಕೆ ಅವಕಾಶ ಕಲ್ಪಿಸುತ್ತದೆ. ಜನರ ದೂರುಗಳಿಗೆ ಸ್ಪಂದಿಸುವುದರ ಜೊತೆಗೆ, ಕೈಗೊಂಡ ಕ್ರಮಗಳ ಕುರಿತು ಸೂಕ್ತ ಅನುಸರಣೆ ನಡೆಸುವುದು ಸಹ ಮುಖ್ಯವಾಗಿದೆ.

'ಜನರ ದನಿಗೆ ಸ್ಪಂದನೆ, ಸುಶಾಸನದ ವಂದನೆ' ಹಾಗೂ 'ಸಮಸ್ಯೆ ನಿಮ್ಮದು, ಪರಿಹಾರ ನಮ್ಮದು' ಎಂಬ ಆಶಯದೊಂದಿಗೆ ನಡೆದ ಕಾರ್ಯಕ್ರಮವು ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸುವ ಮತ್ತು ಸರ್ಕಾರಿ ಸೇವೆಗಳನ್ನು ಜನರಿಗೆ ತಲುಪಿಸುವ ಪ್ರಯತ್ನವಾಗಿ ಗಮನ ಸೆಳೆಯಿತು.

ಜನಪ್ರತಿನಿಧಿಗಳು, ಅಧಿಕಾರಿಗಳು ಭಾಗಿ

ಕಾರ್ಯಕ್ರಮದಲ್ಲಿ ಸಚಿವರಾದ ಈಶ್ವರ್ ಖಂಡ್ರೆ, ಡಾ. ಯತೀಂದ್ರ ಸಿದ್ದರಾಮಯ್ಯ, ಸಂಸದ ಜಿ.ಸಿ. ಚಂದ್ರಶೇಖರ್, ಶಾಸಕರಾದ ಕೆ. ವೆಂಕಟೇಶ್, ಅನಿಲ್ ಚಿಕ್ಕಮಾದು, ಡಿ. ರವಿಶಂಕರ್, ವಿಧಾನ ಪರಿಷತ್ ಸದಸ್ಯರಾದ ಡಾ. ಡಿ. ತಿಮ್ಮಯ್ಯ, ಡಾ. ಕೆ. ಶಿವಕುಮಾರ್, ಮೈಲಾಕ್ ಅಧ್ಯಕ್ಷ ಎಚ್.ಡಿ. ಗಣೇಶ್, ಅಂಬೇಡ್ಕರ್ ನಿಗಮದ ಅಧ್ಯಕ್ಷ ಸಿ. ನರೇಂದ್ರ, ಭೋವಿ ನಿಗಮದ ಅಧ್ಯಕ್ಷ ರಾಮಪ್ಪ, ತಾಲ್ಲೂಕು ಆಶ್ರಯ ಸಮಿತಿ ಅಧ್ಯಕ್ಷ ನಿತಿನ್ ವೆಂಕಟೇಶ್, ಜಿಲ್ಲಾಧಿಕಾರಿ ಲಕ್ಷ್ಮೀಕಾಂತ ರೆಡ್ಡಿ, ಪ್ರಜಾಸೇವಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಹರ್ಷ ಗುಪ್ತ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಜನಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಪರಿಸರ ಸಂರಕ್ಷಣೆ, ಸ್ವಚ್ಛತೆ ಮತ್ತು ಸಂಸ್ಕೃತಿಯ ಉಳಿವೇ ಸಮೃದ್ಧ ಸಮಾಜದ ಬುನಾದಿ: ವಿಜಯೇಂದ್ರ

"ಮುಂಜಾನೆಯ ಮೆರಗು"

ಶಿಡ್ಲಘಟ್ಟ ಅ, 04– ಪರಿಸರ ಸಂರಕ್ಷಣೆ, ಸ್ವಚ್ಛತೆ ಮತ್ತು ಸಂಸ್ಕೃತಿಯ ಸಂರಕ್ಷಣೆಯೇ ಸಮೃದ್ಧ ಸಮಾಜದ ಬುನಾದಿಯಾಗಿದ್ದು, ಇವುಗಳನ್ನು ಪ್ರತಿಯೊಬ್ಬರೂ ತಮ್ಮ ದೈನಂದಿನ ಜೀವನದ ಭಾಗವಾಗಿಸಿಕೊಳ್ಳಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಯಡಿಯೂರಪ್ಪ ಹೇಳಿದರು.



ಪ್ರಧಾನಿ ನರೇಂದ್ರ ಮೋದಿ ಅವರ ಜನ್ಮದಿನದ ಅಂಗವಾಗಿ ಬಿಜೆಪಿ ವತಿಯಿಂದ ಹಮ್ಮಿಕೊಂಡಿರುವ 'ಸೇವಾ ಸಂಕಲ್ಪ ಅಭಿಯಾನ'ದ ಪ್ರಯುಕ್ತ ಶಿಡ್ಲಘಟ್ಟದ ಶ್ರೀ ವಾಸವಿ ವಿದ್ಯಾಸಂಸ್ಥೆಯ ಆವರಣದಲ್ಲಿ ಸಸಿ ನೆಟ್ಟು, ಬಳಿಕ ಸಮೀಪದ ಪ್ರದೇಶದಲ್ಲಿ ಸ್ವಚ್ಛತಾ ಸೇವೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಪರಿಸರ ಸಂರಕ್ಷಣೆ ಮತ್ತು ಸ್ವಚ್ಛತೆ ಕೇವಲ ಒಂದು ದಿನಕ್ಕೆ ಸೀಮಿತವಾಗಬಾರದು. ಪ್ರತಿಯೊಬ್ಬರೂ ತಮ್ಮ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವ ಮೂಲಕ ಸಾಮಾಜಿಕ ಜವಾಬ್ದಾರಿಯನ್ನು ನಿರ್ವಹಿಸಬೇಕು. ಹಸಿರು ಪರಿಸರದ ನಿರ್ಮಾಣ ಹಾಗೂ ಶುಚಿತ್ವದ ಪಾಲನೆಯಿಂದ ಆರೋಗ್ಯಕರ ಸಮಾಜವನ್ನು ರೂಪಿಸಲು ಸಾಧ್ಯ. ಈ ನಿಟ್ಟಿನಲ್ಲಿ ಜನರಲ್ಲಿ ಪರಿಸರ ಜಾಗೃತಿ ಮೂಡಿಸುವುದು ಅತ್ಯಂತ ಅಗತ್ಯವಾಗಿದೆ ಎಂದು ತಿಳಿಸಿದರು.

ಪ್ರಧಾನಿ ನರೇಂದ್ರ ಮೋದಿ ಅವರ ಜನ್ಮದಿನದ ಅಂಗವಾಗಿ ನಡೆಯುತ್ತಿರುವ 'ಸೇವಾ ಸಂಕಲ್ಪ ಅಭಿಯಾನ'ವು ಸಮಾಜಮುಖಿ ಕಾರ್ಯಗಳ ಮೂಲಕ ಜನಸೇವೆಗೆ ಆದ್ಯತೆ ನೀಡುವ ಉದ್ದೇಶ ಹೊಂದಿದೆ. ಪರಿಸರ ಸಂರಕ್ಷಣೆ, ಸ್ವಚ್ಛತೆ ಹಾಗೂ ಸಾರ್ವಜನಿಕ ಸೇವಾ ಚಟುವಟಿಕೆಗಳ ಮೂಲಕ ಸ್ವಸ್ಥ ಮತ್ತು ವಿಕಸಿತ ಭಾರತ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಇದೇ ಸಂದರ್ಭದಲ್ಲಿ ಸೇವಾ ಸಂಕಲ್ಪ ಅಭಿಯಾನದ ಅಂಗವಾಗಿ ಆಯೋಜಿಸಲಾಗಿದ್ದ ಬಣ್ಣಬಣ್ಣದ ರಂಗೋಲಿ ಸ್ಪರ್ಧೆಯನ್ನು ವೀಕ್ಷಿಸಿದ ವಿಜಯೇಂದ್ರ ಅವರು, ತಮ್ಮ ಕಲಾತ್ಮಕ ಪ್ರತಿಭೆಯ ಮೂಲಕ ಭಾರತೀಯ ಸಂಸ್ಕೃತಿ, ಪರಂಪರೆ ಹಾಗೂ ಸೃಜನಶೀಲತೆಯನ್ನು ಸುಂದರವಾಗಿ ಬಿಂಬಿಸಿದ ಸ್ಪರ್ಧಾಳುಗಳನ್ನು ಅಭಿನಂದಿಸಿದರು.

ಘಾರಂ–7 ಅರ್ಜಿ ಸಲ್ಲಿಸಿದ ಬಿಜೆಪಿ ಕಾರ್ಯಕರ್ತರ ವಿರುದ್ಧ ಪ್ರಕರಣ ಪೊಲೀಸ್ ಮಹಾನಿರ್ದೇಶಕರಿಗೆ ಬಿಜೆಪಿ ನಿಯೋಗದ ಮನವಿ

"ಮುಂಜಾನೆಯ ಮೆರಗು"

ಬೆಂಗಳೂರು ಅ, 04– ಎಸ್ಐಆರ್ (ವಿಶೇಷ ಸಮಗ್ರ ಪರಿಷ್ಕರಣೆ) ಪ್ರಕ್ರಿಯೆಯಲ್ಲಿ ಅಕ್ರಮವಾಗಿ ಮತದಾರರ ಪಟ್ಟಿಗೆ ಸೇರ್ಪಡೆಯಾಗಿದ್ದಾರೆ ಎಂದು ಆರೋಪಿಸಲಾದ ಮತದಾರರ ಹೆಸರುಗಳನ್ನು ತೆಗೆದುಹಾಕುವಂತೆ ಘಾರಂ–7 ಅರ್ಜಿ ಸಲ್ಲಿಸಿದ ಬಿಜೆಪಿ ಕಾರ್ಯಕರ್ತರ ವಿರುದ್ಧ ಕ್ರಿಮಿನಲ್ ಪ್ರಕರಣಗಳನ್ನು ದಾಖಲಿಸಿರುವುದನ್ನು ಖಂಡಿಸಿ, ಬಿಜೆಪಿ ನಿಯೋಗವು ರಾಜ್ಯ ಪೊಲೀಸ್ ಮಹಾನಿರ್ದೇಶಕರ ಕಚೇರಿಗೆ ಭೇಟಿ ನೀಡಿ ಮನವಿ ಸಲ್ಲಿಸಿತು.

ಘಾರಂ–7 ಅರ್ಜಿ ಸಲ್ಲಿಸಿದ ಬಿಜೆಪಿ ಕಾರ್ಯಕರ್ತರ ವಿರುದ್ಧ ಸುಳ್ಳು ಹಾಗೂ ಆಧಾರರಹಿತ ಪ್ರಕರಣಗಳನ್ನು ದಾಖಲಿಸುವ ಮೂಲಕ ರಾಜ್ಯ ಪೊಲೀಸ್ ವ್ಯವಸ್ಥೆಯನ್ನು ದುರುಪಯೋಗಪಡಿಸಿಕೊಳ್ಳಲಾಗುತ್ತಿದೆ ಎಂದು ಬಿಜೆಪಿ ನಾಯಕರು ಆರೋಪಿಸಿದರು. ಈ ಪ್ರಕರಣಗಳ ಹಿಂದೆ ರಾಜಕೀಯ ಒತ್ತಡವಿದೆ ಎಂದು ದೂರಿದ ಅವರು, ಪೊಲೀಸ್ ಇಲಾಖೆ ಯಾವುದೇ ರಾಜಕೀಯ ಪ್ರಭಾವಕ್ಕೆ ಒಳಗಾಗದೆ ನಿಷ್ಪಕ್ಷಪಾತವಾಗಿ ಕಾರ್ಯನಿರ್ವಹಿಸಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಘಾರಂ–7 ಮೂಲಕ ಮತದಾರರ ಪಟ್ಟಿಯಲ್ಲಿನ ಆಕ್ಷೇಪಾರ್ಹ ಹೆಸರುಗಳನ್ನು ತೆಗೆದುಹಾಕುವಂತೆ ಅರ್ಜಿ ಸಲ್ಲಿಸುವುದು ಚುನಾವಣಾ ಪ್ರಕ್ರಿಯೆಯ ಭಾಗವಾಗಿದೆ ಎಂಬುದು ಬಿಜೆಪಿ ನಾಯಕರ ವಾದವಾಗಿದೆ. ಇಂತಹ ಅರ್ಜಿಗಳನ್ನು ಸಲ್ಲಿಸಿದ ಕಾರ್ಯಕರ್ತರ ವಿರುದ್ಧ ಪ್ರಕರಣ ದಾಖಲಿಸುವ ಮೂಲಕ ಅವರನ್ನು ಗುರಿಯಾಗಿಸಲಾಗುತ್ತಿದೆ ಎಂದು ಅವರು ಆರೋಪಿಸಿದರು.

ಚುನಾವಣಾ ಪ್ರಕ್ರಿಯೆಗೆ ಸಂಬಂಧಿಸಿದ ಅರ್ಜಿಗಳನ್ನು ಕಾನೂನು ಮತ್ತು ನಿಯಮಗಳ ಚೌಕಟ್ಟಿನಲ್ಲಿ ಪರಿಶೀಲಿಸಬೇಕು. ಅರ್ಜಿ ಸಲ್ಲಿಸಿದವರ ವಿರುದ್ಧ ರಾಜಕೀಯ ದ್ವೇಷದಿಂದ ಕ್ರಮ ಕೈಗೊಳ್ಳದೆ, ದೂರುಗಳ ಸತ್ಯಾಸತ್ಯತೆಯನ್ನು ಪರಿಶೀಲಿಸಿ ನ್ಯಾಯಸಮ್ಮತವಾಗಿ ಮುಂದುವರಿಯಬೇಕು ಎಂದು ಬಿಜೆಪಿ ನಿಯೋಗ ಒತ್ತಾಯಿಸಿತು.

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ಜವಾಬ್ದಾರಿ ಹೊಂದಿರುವ ಪೊಲೀಸ್ ಇಲಾಖೆ ರಾಜಕೀಯ ಒತ್ತಡಗಳಿಗೆ ಮಣಿಯದೆ ಕಾರ್ಯನಿರ್ವಹಿಸಬೇಕು.



ಪ್ರಕರಣಗಳ ಕುರಿತು ನಿಷ್ಪಕ್ಷಪಾತ ತನಿಖೆ ನಡೆಸಿ, ಕಾನೂನುಬದ್ಧವಾಗಿ ಅಗತ್ಯ ಕ್ರಮ ಕೈಗೊಳ್ಳಲು ಅವಕಾಶ ನೀಡಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಬಿಜೆಪಿ ನಾಯಕರ ನಿಯೋಗ ಭಾಗಿ

ನಿಯೋಗದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಯಡಿಯೂರಪ್ಪ, ಪ್ರತಿಪಕ್ಷದ ನಾಯಕ ಆರ್. ಅಶೋಕ್, ವಿಧಾನ ಪರಿಷತ್ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಮಾಜಿ ಉಪಮುಖ್ಯಮಂತ್ರಿ ಡಾ. ಸಿ.ಎನ್. ಅಶ್ವತ್ಥ್ ನಾರಾಯಣ, ಮಾಜಿ ಸಚಿವರಾದ ಬೈರತಿ ಬಸವರಾಜ್, ಕೆ. ಗೋಪಾಲಯ್ಯ, ಸಂಸದ ಪಿ.ಸಿ. ಮೋಹನ್, ಶಾಸಕರಾದ ಎಸ್. ಆರ್. ವಿಶ್ವನಾಥ್, ಸಿ.ಕೆ. ರಾಮಮೂರ್ತಿ, ಎಂ. ಕೃಷ್ಣಪ್ಪ, ಎಸ್. ರಘು, ಮಾಜಿ ವಿಧಾನ ಪರಿಷತ್ ಸದಸ್ಯ ಅಮರನಾಥ್ ಪಾಟೀಲ್, ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಮ್ ಗೌಡ, ಬೆಂಗಳೂರು ಉತ್ತರ ಜಿಲ್ಲಾಧ್ಯಕ್ಷ ಎಸ್. ಹರೀಶ್, ಬೆಂಗಳೂರು ಕೇಂದ್ರ ಜಿಲ್ಲಾಧ್ಯಕ್ಷ ಸಪ್ತಗಿರಿ ಗೌಡ, ರಾಜ್ಯ ವಕ್ತಾರ ಪ್ರಕಾಶ್ ಶೇಷರಾಘವಾಚಾರ್, ಪ್ರಕೋಷ್ಠಗಳ ರಾಜ್ಯ ಸಂಯೋಜಕ ಎಸ್. ದತ್ತಾತ್ರಿ ಸೇರಿದಂತೆ ಪಕ್ಷದ ಪ್ರಮುಖರು ಉಪಸ್ಥಿತರಿದ್ದರು.

ಗೃಹಜ್ಯೋತಿ ಯೋಜನೆಗೆ ಷರತ್ತು ವಿಧಿಸುವ ಮೂಲಕ ಗ್ಯಾರಂಟಿ ಕಡಿತಕ್ಕೆ ಕಾಂಗ್ರೆಸ್ ಸರ್ಕಾರ ಮುಂದಾಗಿದೆ

"ಮುಂಜಾನೆಯ ಮೆರಗು"

ಬೆಂಗಳೂರು ಅ, 04– ಗ್ಯಾರಂಟಿ ಯೋಜನೆಗಳನ್ನು ಮುಂದುವರಿಸಲು ಕಾಂಗ್ರೆಸ್ ಸರ್ಕಾರ ಹೊಸಹೊಸ ನೆಪಗಳನ್ನು ಹುಡುಕುತ್ತಿದೆ. ಚುನಾವಣೆಗೆ ಮುನ್ನ ಎಲ್ಲರಿಗೂ ಉಚಿತ ವಿದ್ಯುತ್ ನೀಡುವುದಾಗಿ ಭರವಸೆ ನೀಡಿದ್ದ ಸರ್ಕಾರ, ಇದೀಗ ಗೃಹಜ್ಯೋತಿ ಯೋಜನೆಯ ಫಲಾನುಭವಿಗಳ ದಾಖಲೆ ಪರಿಶೀಲನೆಯ ಹೆಸರಿನಲ್ಲಿ ಹೊಸ ಷರತ್ತುಗಳನ್ನು ವಿಧಿಸುತ್ತಿದೆ ಎಂದು ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಆರೋಪಿಸಿದರು.

ಈ ಕುರಿತು ಪ್ರತಿಕ್ರಿಯಿಸಿರುವ ಅವರು, ಬೆಸ್ಕಾಂ ವ್ಯಾಪ್ತಿಯಲ್ಲಿ 29.28 ಲಕ್ಷ ಮನೆಗಳಲ್ಲಿ ದಾಖಲೆ ಪರಿಶೀಲನೆ ನಡೆಸಲು ಸಾಧ್ಯವಾಗಿಲ್ಲ. ಮತ್ತೊಂದೆಡೆ, 5.48 ಲಕ್ಷ ಕುಟುಂಬಗಳು ಅಗತ್ಯ ಮಾಹಿತಿ ನೀಡಿಲ್ಲ ಎನ್ನಲಾಗಿದೆ. ಹೀಗಾಗಿ ಒಟ್ಟು 34.76 ಲಕ್ಷ ಕುಟುಂಬಗಳಿಗೆ ಗೃಹಜ್ಯೋತಿ ಯೋಜನೆಯ ಸೌಲಭ್ಯ ಕಡಿತವಾಗುವ ಆತಂಕ ಎದುರಾಗಿದೆ ಎಂದು ಹೇಳಿದರು.

ಚುನಾವಣೆಗೂ ಮುನ್ನ ಕಾಂಗ್ರೆಸ್ ನಾಯಕರು ಎಲ್ಲರಿಗೂ ಉಚಿತ ವಿದ್ಯುತ್ ನೀಡುವುದಾಗಿ ಭರವಸೆ ನೀಡಿದ್ದರು. ಆದರೆ ಅಧಿಕಾರಕ್ಕೆ ಬಂದ ಬಳಿಕ ದಾಖಲೆ ಪರಿಶೀಲನೆ ಸೇರಿದಂತೆ ವಿವಿಧ ಷರತ್ತುಗಳನ್ನು ಮುಂದಿಡಲಾಗುತ್ತಿದೆ. ಇದರಿಂದ ಸಾರ್ವಜನಿಕರಲ್ಲಿ ಗೊಂದಲ ಮತ್ತು ಆತಂಕ ಉಂಟಾಗಿದೆ ಎಂದು ಅಶೋಕ್ ದೂರಿದರು.

ಗ್ಯಾರಂಟಿ ಯೋಜನೆಗಳಿಗೆ ಹಣಕಾಸಿನ ಸಮಸ್ಯೆ ಎದುರಾಗಿದ್ದರೆ ಸರ್ಕಾರ ಅದನ್ನು



ಸ್ಪಷ್ಟವಾಗಿ ಜನರಿಗೆ ತಿಳಿಸಬೇಕು. ಬದಲಾಗಿ ಮನೆಮನೆಗೆ ಸಿಬ್ಬಂದಿಯನ್ನು ಕಳುಹಿಸಿ ದಾಖಲೆಗಳನ್ನು ಪರಿಶೀಲಿಸುವ ಮೂಲಕ ಫಲಾನುಭವಿಗಳಿಗೆ ತೊಂದರೆ ನೀಡುವುದು ಸರಿಯಲ್ಲ ಎಂದು ಟೀಕಿಸಿದರು.

ಚುನಾವಣಾ ಸಂದರ್ಭದಲ್ಲಿ ಜನರಿಗೆ ನೀಡಿದ ಭರವಸೆಗಳನ್ನು ಅಧಿಕಾರಕ್ಕೆ ಬಂದ ಬಳಿಕವೂ ಸರ್ಕಾರ ಪಾಲಿಸಬೇಕು. ದಾಖಲೆಗಳ ಪರಿಶೀಲನೆಯ ನೆಪದಲ್ಲಿ ಅರ್ಹ ಫಲಾನುಭವಿಗಳು ಯೋಜನೆಯಿಂದ ವಂಚಿತರಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಗ್ಯಾರಂಟಿ ಯೋಜನೆಗಳ ಕುರಿತು ಜನರಿಗೆ ನೀಡಿರುವ ಭರವಸೆಗೆ ಬದ್ಧರಾಗಿರಬೇಕು. ಹೊಸ ಷರತ್ತುಗಳನ್ನು ವಿಧಿಸುವ ಬದಲು ಅರ್ಹ ಫಲಾನುಭವಿಗಳಿಗೆ ಗೃಹಜ್ಯೋತಿ ಸೌಲಭ್ಯ ನಿರಂತರವಾಗಿ ದೊರೆಯುವಂತೆ ನೋಡಿಕೊಳ್ಳಬೇಕು ಎಂದು ಆಗ್ರಹಿಸಿದರು.

"ಜನರಿಗೆ ಬೇಕಿರುವುದು ಕಾಂಗ್ರೆಸ್‌ನ ಗ್ಯಾರಂಟಿ ಅಲ್ಲ, ಕೊಟ್ಟ ಮಾತಿನ ಗ್ಯಾರಂಟಿ" ಎಂದು ಆರ್. ಅಶೋಕ್ ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ಅರ್ಬನ್ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿಯ ನೂತನ ಉಪಾಧ್ಯಕ್ಷರಾಗಿ ಅರುಣ್ ಕುಮಾರ್ ಆಯ್ಕೆ: ಮಾಜಿ ಸಚಿವ ರೇಣುಕಾಚಾರ್ಯ ಅಭಿನಂದನೆ

"ಮುಂಜಾನೆಯ ಮೆರಗು"

ಹೊನ್ನಾಳಿ ಅ, 04– ನಗರದ ಅರ್ಬನ್ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿಯ ನೂತನ ಉಪಾಧ್ಯಕ್ಷರಾಗಿ ಆಯ್ಕೆಯಾಗಿರುವ ಅರುಣ್ ಕುಮಾರ್ ಅವರನ್ನು ಮಾಜಿ ಸಚಿವ ಎಂ.ಪಿ. ರೇಣುಕಾಚಾರ್ಯ ಅವರು ಭೇಟಿ ಮಾಡಿ ಅಭಿನಂದಿಸಿ, ಶುಭ ಹಾರೈಸಿದರು.



ಹೊನ್ನಾಳಿ ನಗರದ ಅರ್ಬನ್ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿಯ ಉಪಾಧ್ಯಕ್ಷ ಸ್ಥಾನಕ್ಕೆ ಅರುಣ್ ಕುಮಾರ್ ಆಯ್ಕೆಯಾಗಿರುವ ಹಿನ್ನೆಲೆಯಲ್ಲಿ ಮಾಜಿ ಸಚಿವ ರೇಣುಕಾಚಾರ್ಯ ಅವರು ಅವರನ್ನು ಭೇಟಿ ಮಾಡಿ ಅಭಿನಂದನೆ ಸಲ್ಲಿಸಿದರು. ಈ ಸಂದರ್ಭದಲ್ಲಿ ನೂತನ ಜವಾಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸಿ, ಸಹಕಾರ ಕ್ಷೇತ್ರದಲ್ಲಿ ಉತ್ತಮ ಕಾರ್ಯಗಳ ಮೂಲಕ ಸಂಸ್ಥೆಯ ಪ್ರಗತಿಗೆ ಕೊಡುಗೆ ನೀಡುವಂತೆ ಶುಭ ಹಾರೈಸಿದರು.

ಸಹಕಾರ ಸಂಘಗಳು ಸಾಮಾನ್ಯ ಜನರು, ಸಣ್ಣ ವ್ಯಾಪಾರಿಗಳು ಹಾಗೂ ಮಧ್ಯಮ ವರ್ಗದ ಜನರ ಆರ್ಥಿಕ ಚಟುವಟಿಕೆಗಳಿಗೆ ನೆರವಾಗುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ. ಈ ನಿಟ್ಟಿನಲ್ಲಿ ಸಹಕಾರ ಸಂಸ್ಥೆಗಳ ಆಡಳಿತದಲ್ಲಿ ಪಾರದರ್ಶಕತೆ, ಸದಸ್ಯರ ವಿಶ್ವಾಸ ಹಾಗೂ ಆರ್ಥಿಕ ಶಿಸ್ತು ಕಾಪಾಡುವುದು ಅತ್ಯಂತ ಮುಖ್ಯವಾಗಿದೆ. ನೂತನ ಉಪಾಧ್ಯಕ್ಷರಾದ ಅರುಣ್ ಕುಮಾರ್ ಅವರು ಸಂಘದ ಸದಸ್ಯರ ಹಿತಾಸಕ್ತಿಗೆ ಆದ್ಯತೆ ನೀಡಿ, ಸಂಸ್ಥೆಯ ಬೆಳವಣಿಗೆಗೆ ಶ್ರಮಿಸಲಿ ಎಂಬ ಆಶಯವನ್ನು ಈ ಸಂದರ್ಭದಲ್ಲಿ ವ್ಯಕ್ತಪಡಿಸಲಾಯಿತು.

ಮಾಜಿ ಸಚಿವ ರೇಣುಕಾಚಾರ್ಯ ಅವರ ಭೇಟಿ ಹಾಗೂ ಅಭಿನಂದನೆ ಅರುಣ್ ಕುಮಾರ್ ಅವರಿಗೆ ಸಂತಸ ತಂದಿದ್ದು, ಅವರ ಆಯ್ಕೆಗೆ ಶುಭಾಶಯಗಳು ವ್ಯಕ್ತವಾಗಿವೆ. ಈ ಸಂದರ್ಭದಲ್ಲಿ ಸ್ಥಳೀಯ ಮುಖಂಡರು, ಸೊಸೈಟಿಯ ಸದಸ್ಯರು ಹಾಗೂ ಹಿತೈಷಿಗಳು ಉಪಸ್ಥಿತರಿದ್ದರೆಂದು ತಿಳಿದುಬಂದಿದೆ.

ನ್ಯಾಮತಿಯಲ್ಲಿ ಶ್ರೀ ಗಣೇಶ ವಿಸರ್ಜನಾ ಮೆರವಣಿಗೆಗೆ ಮಾಜಿ ಸಚಿವ ರೇ

ಮರಿಕಟ್ಟೆಯಲ್ಲಿ ಮೂಲಸೌಕರ್ಯ ಮರೀಚಿಕೆ: ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಗ್ರಾಮಸ್ಥರ ಆಕ್ರೋಶ

ಚರಂಡಿ ಸ್ವಚ್ಛತೆ ಇಲ್ಲದೆ ಕೊಳಚೆ ನೀರು ರಸ್ತೆಗೆ । ಕುಡಿಯುವ ನೀರು, ಬೀದಿ ದೀಪಕ್ಕೂ ಸಮಸ್ಯೆ

"ಮುಂಜಾನೆಯ ಮೆರಗು"

ಜಗಳೂರು ಅ, 04– ತಾಲ್ಲೂಕಿನ ಗಡಿಗ್ರಾಮ ಮರಿಕಟ್ಟೆಯಲ್ಲಿ ಮೂಲಸೌಕರ್ಯಗಳ ಕೊರತೆ ತೀವ್ರವಾಗಿದ್ದು, ಚರಂಡಿ ಸ್ವಚ್ಛತೆ, ಕುಡಿಯುವ ನೀರು ಹಾಗೂ ಬೀದಿ ದೀಪದ ಸಮಸ್ಯೆಯಿಂದ ಗ್ರಾಮಸ್ಥರು ಪರದಾಡುವಂತಾಗಿದೆ. ಅಧಿಕಾರಿಗಳಿಗೆ ಹಲವು ಬಾರಿ ಮನವಿ ಮಾಡಿದರೂ ಸಮಸ್ಯೆ ಬಗೆಹರಿದಿಲ್ಲ ಎಂದು ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕ್ಯಾಸೇನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮರಿಕಟ್ಟೆ ಗ್ರಾಮದಲ್ಲಿ ಹಲವು ತಿಂಗಳಿಂದ ಚರಂಡಿಗಳನ್ನು ಸ್ವಚ್ಛಗೊಳಿಸದ ಪರಿಣಾಮ ಹೂಳು, ಕಸ, ತ್ಯಾಜ್ಯ ಹಾಗೂ ಗಿಡಗಂಟೆಗಳು ತುಂಬಿಕೊಂಡಿವೆ. ಸಾರ್ವಜನಿಕರ ಬಳಕೆಗಾಗಿ ನಿರ್ಮಿಸಿರುವ ನೀರಿನ ಟ್ಯಾಂಕ್ ಮತ್ತು ತೊಟ್ಟಿಯ ಸುತ್ತಮುತ್ತಲೂ ಕೊಳಚೆ ಆವರಿಸಿದ್ದು, ಚರಂಡಿಯ ನೀರು ರಸ್ತೆಗೆ ಹರಿಯುತ್ತಿದೆ.

ಇದರಿಂದ ಗ್ರಾಮದಲ್ಲಿ ದುರ್ವಾಸನೆ ಹರಡುವುದರ ಜತೆಗೆ ಸೊಳ್ಳೆಗಳ ಹಾವಳಿ ಹೆಚ್ಚಾಗಿದೆ. ಚರಂಡಿ ಹಾಗೂ ಗಿಡಗಂಟೆಗಳ ನಡುವೆ ವಿಷಜಂತುಗಳು ಅಡಗಿಕೊಂಡಿದ್ದು, ರಾತ್ರಿ ವೇಳೆ ಮನೆಗಳ ಸುತ್ತಮುತ್ತ ಹಾವು, ಚೇಳುಗಳು ಕಾಣಿಸಿಕೊಳ್ಳುತ್ತಿರುವುದರಿಂದ ಗ್ರಾಮಸ್ಥರು ಆತಂಕದಲ್ಲಿದ್ದಾರೆ.

ಅಂತರ್ಜಲ ಕುಸಿತ; ಕುಡಿಯುವ ನೀರಿಗೆ ಪರದಾಟ

ಗ್ರಾಮದ ಬೋರ್‌ವೆಲ್‌ಗಳಲ್ಲಿ ಅಂತರ್ಜಲಮಟ್ಟ ಕುಸಿದಿರುವುದರಿಂದ ಜನರು ಹಾಗೂ ಜಾನುವಾರುಗಳಿಗೆ ಸಮರ್ಪಕ ನೀರು ದೊರೆಯುತ್ತಿಲ್ಲ.



ಮತ್ತೊಂದೆಡೆ, ಗ್ರಾಮದಲ್ಲಿರುವ ಆರ್‌ಒ ಘಟಕ ದುರಸ್ತಿಗೊಳಗಾಗಿರುವುದರಿಂದ ಶುದ್ಧ ಕುಡಿಯುವ ನೀರಿಗೂ ಸಮಸ್ಯೆ ಎದುರಾಗಿದೆ. ಬೇಸಿಗೆಯ ಮುನ್ನವೇ ನೀರಿನ ಸಮಸ್ಯೆ ತೀವ್ರವಾಗುವ ಆತಂಕ ಗ್ರಾಮಸ್ಥರಲ್ಲಿ ಮೂಡಿದೆ.


ಬೀದಿ ದೀಪವಿಲ್ಲದೆ ಕಗ್ಗತ್ತಲು

ಗ್ರಾಮದ ಹಲವು ಬೀದಿ ದೀಪಗಳ ಬಲ್ಬ್‌ಗಳು ಇಲ್ಲದಿರುವುದರಿಂದ ರಾತ್ರಿ ವೇಳೆ ಗ್ರಾಮದಲ್ಲಿ ಕಗ್ಗತ್ತಲು ಆವರಿಸುತ್ತಿದೆ. ಚರಂಡಿ ಸಮಸ್ಯೆ ಹಾಗೂ ವಿಷಜಂತುಗಳ ಹಾವಳಿ ಇರುವ ಸಂದರ್ಭದಲ್ಲಿ ಬೀದಿ ದೀಪಗಳ ಕೊರತೆ ಮತ್ತಷ್ಟು ಆತಂಕಕ್ಕೆ ಕಾರಣವಾಗಿದೆ ಎಂದು ಗ್ರಾಮಸ್ಥರು ತಿಳಿಸಿದ್ದಾರೆ.

ಹಾಡುಹಗಲೇ ಹಾವುಗಳ ದರ್ಶನ

ಚರಂಡಿಗಳು ಸ್ವಚ್ಛವಾಗದೆ ಕಸ, ಕೊಳಚೆ ಹಾಗೂ ತ್ಯಾಜ್ಯದಿಂದ ತುಂಬಿಕೊಂಡಿರುವ ಪರಿಣಾಮ ಹಾವು, ಚೇಳು ಸೇರಿದಂತೆ ವಿಷಜಂತುಗಳ ಹಾವಳಿ ಹೆಚ್ಚಾಗಿದೆ. ಹಾಡುಹಗಲೇ ಹಾವುಗಳು ಕಾಣಿಸಿಕೊಳ್ಳುತ್ತಿದ್ದು, ಮಕ್ಕಳಿಗೂ ಹಾವು ಕಚ್ಚಿದ ಘಟನೆಗಳು ನಡೆದಿವೆ. ತಕ್ಷಣ ಆಸ್ಪತ್ರೆಗೆ ಕರೆದೊಯ್ದು ಚಿಕಿತ್ಸೆ ಕೊಡಿಸಿದ ಪರಿಣಾಮ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ ಎಂದು ಗ್ರಾಮಸ್ಥರು ತಿಳಿಸಿದ್ದಾರೆ.

ಕೂಡಲೇ ಅಧಿಕಾರಿಗಳು ಗ್ರಾಮಕ್ಕೆ ಭೇಟಿ ನೀಡಿ ಚರಂಡಿಗಳನ್ನು ಸ್ವಚ್ಛಗೊಳಿಸುವುದು, ಹೂಳು ಹಾಗೂ ಗಿಡಗಂಟಿ



ತೆರವುಗೊಳಿಸುವುದು, ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವುದು ಹಾಗೂ ಬೀದಿ ದೀಪಗಳನ್ನು ದುರಸ್ತಿಗೊಳಿಸುವ ಮೂಲಕ ಗ್ರಾಮಸ್ಥರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಗ್ರಾಮದ ನಾಗರಾಜ್, ಮಹಾಂತೇಶ್ ಒತ್ತಾಯಿಸಿದ್ದಾರೆ.

ಅಧಿಕಾರಿಗಳ ಸ್ಪಂದನೆ

"ಗ್ರಾಮದ ಚರಂಡಿ ಸ್ವಚ್ಛಗೊಳಿಸಲು, ಬೀದಿ ದೀಪಗಳ ವ್ಯವಸ್ಥೆ ಕಲ್ಪಿಸಲು ಹಾಗೂ ಕುಡಿಯುವ ನೀರಿನ ಪೂರೈಕೆಗೆ ಕ್ರಮ ಕೈಗೊಳ್ಳುವಂತೆ ಪಿಡಿಒಗೆ ಸೂಚಿಸಲಾಗಿದೆ. ವಿಷಜಂತುಗಳ ಹಾವಳಿ ಕುರಿತು ಗಮನಕ್ಕೆ ಬಂದಿದ್ದು, ಕೂಡಲೇ ಚರಂಡಿಯ ಹೂಳು ಹಾಗೂ ಗಿಡಗಂಟೆಗಳನ್ನು ತೆರವುಗೊಳಿಸಿ ಸಮಸ್ಯೆ ಬಗೆಹರಿಸುವಂತೆ ತಿಳಿಸಲಾಗಿದೆ" ಎಂದು ತಾಲೂಕು ಪಂಚಾಯಿತಿ ಇಒ ಕೆಂಚಪ್ಪ ಅವರು ದೂರವಾಣಿ ಮೂಲಕ ಪತ್ರಿಕೆಗೆ ತಿಳಿಸಿದ್ದಾರೆ.

ಫ್ರೋಬಾಲ್‌ನಲ್ಲಿ ಹಿರೇಮಲ್ಲನಹೊಳೆ ಸರ್ಕಾರಿ ಪ್ರೌಢಶಾಲೆ ವಿದ್ಯಾರ್ಥಿನಿಯರ ಅಮೋಘ ಸಾಧನೆ

"ಮುಂಜಾನೆಯ ಮೆರಗು"

ಜಗಳೂರು ಅ, 04– ತಾಲೂಕಿನ ಹಿರೇಮಲ್ಲನಹೊಳೆ ಗ್ರಾಮದ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿಯರು ಜಿಲ್ಲಾ ವಾಲಿಬಾಲ್ ಕ್ರೀಡಾಕೂಟದಲ್ಲಿ ಥ್ರೋಬಾಲ್ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ಬೆಂಗಳೂರು ವಿಭಾಗ ಮಟ್ಟದ ಸ್ಪರ್ಧೆಗೆ ಆಯ್ಕೆಯಾಗುವ ಮೂಲಕ ಶಾಲೆಗೆ ಹಾಗೂ ತಾಲೂಕಿಗೆ ಕೀರ್ತಿ ತಂದಿದ್ದಾರೆ.



ಜಿಲ್ಲಾಮಟ್ಟದಲ್ಲಿ ಉತ್ತಮ ಪ್ರದರ್ಶನ ನೀಡಿದ ವಿದ್ಯಾರ್ಥಿನಿಯರ ಸಾಧನೆಗೆ ಶಾಲೆಯ ಶಿಕ್ಷಕರು, ಪೋಷಕರು ಹಾಗೂ ಗ್ರಾಮಸ್ಥರು ಹರ್ಷ ವ್ಯಕ್ತಪಡಿಸಿದ್ದಾರೆ. ಗ್ರಾಮೀಣ ಪ್ರದೇಶದ ವಿದ್ಯಾರ್ಥಿನಿಯರು ಕ್ರೀಡಾ ಕ್ಷೇತ್ರದಲ್ಲಿಯೂ ತಮ್ಮ ಪ್ರತಿಭೆ ಮೆರೆದಿರುವುದು ಶ್ಲಾಘನೀಯವಾಗಿದೆ.

ವಿದ್ಯಾರ್ಥಿನಿಯರ ಸಾಧನೆಗೆ ಕ್ಷೇತ್ರ ಶಿಕ್ಷಣಾಧಿಕಾರಿ ಹಾಲಮೂರ್ತಿ, ಕ್ಷೇತ್ರ ಸಮನ್ವಯಾಧಿಕಾರಿ ಹಾಲಪ್ಪ, ಶಾಲೆಯ ಮುಖ್ಯ ಶಿಕ್ಷಕ ತೋಟಗಂಟಿ ಪ್ರಕಾಶ್, ಸರ್ಕಾರಿ ನೌಕರರ ಸಂಘದ ಪ್ರಧಾನ ಕಾರ್ಯದರ್ಶಿ ಕಲ್ಲಿನಾಥ್, ಕ್ರೀಡಾ ತರಬೇತುದಾರ ಮಂಜುನಾಥ್ ಅಭಿನಂದನೆ ಸಲ್ಲಿಸಿದ್ದಾರೆ.

ಶಾಲೆಯ ಸಿಬ್ಬಂದಿಗಳಾದ ದಾಕ್ಷಾಯಣಿ, ಪ್ರಶಾಂತ್ ಸ್ವಾಮಿ, ನಾಗೇಂದ್ರಪ್ಪ, ಆನಂದ್ ರಾವ್, ಮಹೇಶ್, ಮಾನವ ಬಂಧುತ್ವ ವೇದಿಕೆಯ ಸಂಚಾಲಕ ಕಾನನಕಟ್ಟೆ ಪ್ರಭಣ್ಣ, ಸಿಬ್ಬಂದಿ ವರ್ಗ, ಎಸ್‌ಡಿಎಂಸಿ ಅಧ್ಯಕ್ಷರು ಹಾಗೂ ಸದಸ್ಯರು ವಿದ್ಯಾರ್ಥಿನಿಯರ ಸಾಧನೆಗೆ ಶುಭ ಹಾರೈಸಿದ್ದಾರೆ.

ಬೆಂಗಳೂರು ವಿಭಾಗ ಮಟ್ಟದಲ್ಲಿಯೂ ವಿದ್ಯಾರ್ಥಿನಿಯರು ಉತ್ತಮ ಪ್ರದರ್ಶನ ನೀಡಿ ಗೆಲುವು ಸಾಧಿಸಲಿ ಎಂದು ಶಿಕ್ಷಕರು ಹಾಗೂ ಪೋಷಕರು ಆಶಿಸಿದ್ದಾರೆ.

ರಾಜ್ಯ ಸಂಘಟನಾ ಕಾರ್ಯಾಧ್ಯಕ್ಷರಾಗಿ ಚಿಕ್ಕ ಉಜ್ಜಿನಿ ಆಂಜನಪ್ಪ ನೇಮಕ

"ಮುಂಜಾನೆಯ ಮೆರಗು"

ಜಗಳೂರು ಅ, 04– ಕರ್ನಾಟಕ ರಾಜ್ಯ ಕುರುಬರ ಸಂಘದ ರಾಜ್ಯ ಸಂಘಟನಾ ಕಾರ್ಯಾಧ್ಯಕ್ಷರನ್ನಾಗಿ ತಾಲೂಕಿನ ಚಿಕ್ಕ ಉಜ್ಜಿನಿ ಗ್ರಾಮದ ಆಂಜಿನಪ್ಪ ಅವರನ್ನು ನೇಮಕ ಮಾಡಲಾಗಿದೆ.



ಕರ್ನಾಟಕ ರಾಜ್ಯ ಕುರುಬರ ಸಂಘದ ರಾಜ್ಯಾಧ್ಯಕ್ಷ ಪ್ರಭುಲಿಂಗ ದೊಡ್ಡೇಣಿ ಅವರು ಆಂಜನಪ್ಪ ಅವರನ್ನು ರಾಜ್ಯ ಸಂಘಟನಾ ಕಾರ್ಯಾಧ್ಯಕ್ಷರನ್ನಾಗಿ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.

ಸಂಘದ ಸಂಘಟನೆಯನ್ನು ರಾಜ್ಯಾದ್ಯಂತ ಮತ್ತಷ್ಟು ಬಲಪಡಿಸುವುದು, ಸಮುದಾಯದ ಮುಖಂಡರು ಹಾಗೂ ಪದಾಧಿಕಾರಿಗಳನ್ನು ಒಗ್ಗೂಡಿಸಿ ಸಂಘಟನಾತ್ಮಕ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ನಡೆಸುವುದು ಸೇರಿದಂತೆ ವಿವಿಧ ಜವಾಬ್ದಾರಿಗಳನ್ನು ನಿರ್ವಹಿಸುವ ಹೊಣೆಗಾರಿಕೆ ಆಂಜನಪ್ಪ ಅವರಿಗೆ ನೀಡಲಾಗಿದೆ.

20 ದಿನಗಳಿಂದ ಕುಡಿಯುವ ನೀರಿಲ್ಲ: ಪ.ಪಂ.ಗೆ ಇಂದಿರಾ ಬಡಾವಣೆ ನಿವಾಸಿಗಳ ಮುತ್ತಿಗೆ

ಮೋಟರ್ ದುರಸ್ತಿಯಾಗದಿದ್ದರೆ ಟ್ಯಾಂಕರ್ ಮೂಲಕ ನೀರು ಪೂರೈಕೆ: ಅಧಿಕಾರಿಗಳ ಭರವಸೆ

"ಮುಂಜಾನೆಯ ಮೆರಗು"

ಜಗಳೂರು ಅ, 04– ಕಳೆದ ಇಪ್ಪತ್ತು ದಿನಗಳಿಂದ ಸಮರ್ಪಕವಾಗಿ ಕುಡಿಯುವ ನೀರು ಪೂರೈಕೆಯಾಗುತ್ತಿಲ್ಲ ಎಂದು ಆರೋಪಿಸಿ ಪಟ್ಟಣದ ಇಂದಿರಾ ಬಡಾವಣೆ (ಜಾಟ್‌ಪಟ್) ನಿವಾಸಿಗಳು ಶನಿವಾರ ಸಂಜೆ ಪಟ್ಟಣ ಪಂಚಾಯಿತಿ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು.

ಬಡಾವಣೆಯ ಹಲವು ಮನೆಗಳಿಗೆ ನಿಗದಿತ ಪ್ರಮಾಣದಲ್ಲಿ ನೀರು ಪೂರೈಕೆಯಾಗದೆ ನಿವಾಸಿಗಳು ಪರದಾಡುವಂತಾಗಿದೆ. ನೀರಿನ ಸಮಸ್ಯೆ ಕುರಿತು ಹಲವು ಬಾರಿ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದರೂ ಶಾಶ್ವತ ಪರಿಹಾರ ಕಲ್ಪಿಸಿಲ್ಲ ಎಂದು ನಿವಾಸಿಗಳು ಅಸಮಾಧಾನ ವ್ಯಕ್ತಪಡಿಸಿದರು.

ಶನಿವಾರ ಸಂಜೆ ಪಟ್ಟಣ ಪಂಚಾಯಿತಿ ಕಚೇರಿಗೆ ಆಗಮಿಸಿದ ನಿವಾಸಿಗಳು, ನೀರು ಸರಬರಾಜು ವ್ಯವಸ್ಥೆ ಸಮರ್ಪಕವಾಗಿ ನಿರ್ವಹಿಸದಿರುವ ಅಧಿಕಾರಿಗಳು ಹಾಗೂ ನೀರು ಸರಬರಾಜು ಸಿಬ್ಬಂದಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಬೇಸಿಗೆಯಲ್ಲಷ್ಟೇ ಅಲ್ಲದೆ ಸದ್ಯವೂ ಕುಡಿಯುವ ನೀರಿಗಾಗಿ ಪರದಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿರುವುದು ಆಡಳಿತದ ನಿರ್ಲಕ್ಷ್ಯಕ್ಕೆ ಸಾಕ್ಷಿಯಾಗಿದೆ ಎಂದು ಆರೋಪಿಸಿದರು.

ನೀರು ಕೇಳಿದರೆ ಉಡಾಫೆ ಉತ್ತರ

ನಿವಾಸಿ ಸಾಕಮ್ಮ ಮಾತನಾಡಿ, ಕಳೆದ ಇಪ್ಪತ್ತು ದಿನಗಳಿಂದ ಬಡಾವಣೆಯಲ್ಲಿ ಕುಡಿಯುವ ನೀರು ಸರಬರಾಜಿನಲ್ಲಿ ಸಮಸ್ಯೆ ಉಂಟಾಗಿದೆ. ಈ ಕುರಿತು ನೀರುಗಂಟಿಯನ್ನು ಪ್ರಶ್ನಿಸಿದರೆ, 'ಯಾರಿಗಾದರೂ ಹೇಳಿಕೊಳ್ಳಿ' ಎಂಬ ರೀತಿಯಲ್ಲಿ ಉಡಾಫೆಯ ಉತ್ತರ ನೀಡುತ್ತಾರೆ. ಸಮಸ್ಯೆ ಪರಿಹರಿಸುವವರು ಯಾರು? ನಾವು ಯಾರನ್ನು ಕೇಳಬೇಕು ಎಂದು ಪ್ರಶ್ನಿಸಿದ ಅವರು, ಕೂಡಲೇ



ಸಮರ್ಪಕ ನೀರು ಪೂರೈಕೆ ಮಾಡುವಂತೆ ಆಗ್ರಹಿಸಿದರು.

ನಿವಾಸಿಗಳಾದ ರುಕ್ಷನಾ ಬಾಬು ಹಾಗೂ ಮಂಜಮ್ಮ ಮಾತನಾಡಿ, ಬಡಾವಣೆಯ ಜನರು ಕುಡಿಯುವ ನೀರಿಗಾಗಿ ಪ್ರತಿದಿನ ಪರದಾಡುವಂತಾಗಿದೆ. ಮನೆ ಬಳಕೆಗೆ ಅಗತ್ಯವಿರುವ ನೀರು ಸಿಗದೆ ದೂರದ ಪ್ರದೇಶಗಳಿಗೆ ತೆರಳಿ ನೀರು ತರುವ ಪರಿಸ್ಥಿತಿ ನಿರ್ಮಾಣವಾಗಿದೆ. ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಸಮಸ್ಯೆಯ ವಾಸ್ತವಾಂಶ ಪರಿಶೀಲಿಸಿ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಮೋಟರ್ ದುರಸ್ತಿಗೆ ಕ್ರಮ: ಆರ್‌ಐ ಮದಕರಿನಾಯಕ

ನಿವಾಸಿಗಳ ಅಹವಾಲು ಆಲಿಸಿದ ಕಂದಾಯ ನಿರೀಕ್ಷಕ (ಆರ್‌ಐ) ಮದಕರಿನಾಯಕ ಮಾತನಾಡಿ, ಬಡಾವಣೆಗೆ ನೀರು ಪೂರೈಸುವ ಮೋಟರ್ ಕೆಟ್ಟುಹೋಗಿರುವ ಹಿನ್ನೆಲೆಯಲ್ಲಿ ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಿದೆ. ಹೊಸ ಮೋಟರ್ ವ್ಯವಸ್ಥೆ ಮಾಡುವಂತೆ ಈಗಾಗಲೇ ಸಂಬಂಧಪಟ್ಟವರಿಗೆ ಸೂಚನೆ ನೀಡಲಾಗಿದೆ. ಮೋಟರ್ ದುರಸ್ತಿ ಅಥವಾ ಹೊಸ ಮೋಟರ್ ಅಳವಡಿಕೆ ತಕ್ಷಣ ಸಾಧ್ಯವಾಗದಿದ್ದರೆ, ಪರ್ಯಾಯವಾಗಿ ಟ್ಯಾಂಕರ್ ಮೂಲಕ ಕುಡಿಯುವ ನೀರು ಪೂರೈಸಲು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಅಧಿಕಾರಿಗಳ ಭರವಸೆಯ ಬಳಿಕ ನಿವಾಸಿಗಳು ಪ್ರತಿಭಟನೆ ಹಿಂಪಡೆದರು. ಆದರೆ, ಇಪ್ಪತ್ತು ದಿನಗಳಿಂದ ಎದುರಾಗಿರುವ ನೀರಿನ ಸಮಸ್ಯೆಯನ್ನು ಕೂಡಲೇ ಪರಿಹರಿಸಿ, ಮುಂದಿನ ದಿನಗಳಲ್ಲಿ ಇಂತಹ ಪರಿಸ್ಥಿತಿ ಮರುಕಳಿಸದಂತೆ ಶಾಶ್ವತ ಕ್ರಮ ಕೈಗೊಳ್ಳಬೇಕು ಎಂದು ನಿವಾಸಿಗಳು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಇಂದಿರಾ ಬಡಾವಣೆಯ ಹಲವು ನಿವಾಸಿಗಳು ಉಪಸ್ಥಿತರಿದ್ದರು.

ಗ್ರಂಥಾಲಯದಲ್ಲಿ ವಿದ್ಯಾರ್ಥಿಗಳೊಂದಿಗೆ ಶಾಸಕ ದೇವೇಂದ್ರಪ್ಪ ಸಂವಾದ

"ಮುಂಜಾನೆಯ ಮೆರಗು"

ಜಗಳೂರು, ಅ, 04– ಪಟ್ಟಣದ ಜನಸಂಪರ್ಕ ಕಚೇರಿ ಮುಂಭಾಗದಲ್ಲಿರುವ ಸಾರ್ವಜನಿಕ ಗ್ರಂಥಾಲಯಕ್ಕೆ ಶನಿವಾರ ಜಗಳೂರು ವಿಧಾನಸಭಾ ಕ್ಷೇತ್ರದ ಶಾಸಕ ಬಿ. ದೇವೇಂದ್ರಪ್ಪ ಭೇಟಿ ನೀಡಿ, ಗ್ರಂಥಾಲಯದಲ್ಲಿ ಓದುತ್ತಿದ್ದ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು.



ಈ ಸಂದರ್ಭದಲ್ಲಿ ವಿದ್ಯಾರ್ಥಿಗಳ ಓದು, ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿ ಹಾಗೂ ಗ್ರಂಥಾಲಯದಲ್ಲಿ ಲಭ್ಯವಿರುವ ಸೌಲಭ್ಯಗಳ ಕುರಿತು ಶಾಸಕ ದೇವೇಂದ್ರಪ್ಪ ಮಾಹಿತಿ ಪಡೆದುಕೊಂಡರು. ವಿದ್ಯಾರ್ಥಿಗಳೊಂದಿಗೆ ನೇರವಾಗಿ ಚರ್ಚಿಸಿ, ಅವರ ಸಮಸ್ಯೆಗಳು ಹಾಗೂ ಅಗತ್ಯಗಳನ್ನು ಆಲಿಸಿದರು.

ಗ್ರಂಥಾಲಯದಲ್ಲಿ ಕುಡಿಯುವ ನೀರು, ಆಸನ ವ್ಯವಸ್ಥೆ, ಪುಸ್ತಕಗಳ ಲಭ್ಯತೆ ಸೇರಿದಂತೆ ವಿದ್ಯಾರ್ಥಿಗಳಿಗೆ ಎದುರಾಗುತ್ತಿರುವ ಸಮಸ್ಯೆಗಳ ಕುರಿತು ವಿದ್ಯಾರ್ಥಿಗಳು ಶಾಸಕರ ಗಮನಕ್ಕೆ ತಂದರು.

ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಗ್ರಂಥಾಲಯಗಳು ಪ್ರಮುಖ ವೇದಿಕೆಯಾಗಿದ್ದು, ಅಗತ್ಯ ಸೌಲಭ್ಯಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ಶಾಸಕ ಬಿ. ದೇವೇಂದ್ರಪ್ಪ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ವಿದ್ಯಾರ್ಥಿಗಳು ಹಾಗೂ ಗ್ರಂಥಾಲಯ ಸಿಬ್ಬಂದಿ ಉಪಸ್ಥಿತರಿದ್ದರು.

ನನ್ನ ಅನುದಾನದಲ್ಲಿ ಕೆಲಸ; ನಿಮ್ಮ ಸಾಧನೆ ಏನು?

ದೇವೇಂದ್ರಪ್ಪಗೆ ಮಾಜಿ ಶಾಸಕ ರಾಮಚಂದ್ರ ನೇರ ಪ್ರಶ್ನೆ

"ಮುಂಜಾನೆಯ ಮೆರಗು"

ಜಗಳೂರು, ಅ, 04– ನನ್ನ ಆಡಳಿತಾವಧಿಯಲ್ಲಿ ಸುಮಾರು 3,500 ಕೋಟಿ ಅನುದಾನದಲ್ಲಿ ಕ್ಷೇತ್ರದ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡಿದ್ದೇನೆ. ಮೂರೂವರೆ ವರ್ಷಗಳ ಆಡಳಿತದಲ್ಲಿ ಹಾಲಿ ಶಾಸಕ ಬಿ.ದೇವೇಂದ್ರಪ್ಪ ಅವರ ಸಾಧನೆ ಏನು ಎಂಬುದನ್ನು ಜನರ ಮುಂದೆ ತಿಳಿಸಲಿ ಎಂದು ಮಾಜಿ ಶಾಸಕ ಎಸ್.ವಿ.ರಾಮಚಂದ್ರ ಸವಾಲು ಹಾಕಿದರು.

ಪಟ್ಟಣದಲ್ಲಿರುವ ತಮ್ಮ ನಿವಾಸದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜಕೀಯ ಭಿನ್ನಾಭಿಪ್ರಾಯಗಳಿದ್ದರೂ ವೈಯಕ್ತಿಕ ಆರೋಪ–ಪ್ರತ್ಯಾರೋಪಗಳಿಗೆ ಇಳಿಯುವುದು ಸರಿಯಲ್ಲ. ಮಾತಿನಲ್ಲಿ ಸಭ್ಯತೆ ಇರಬೇಕು. ತಮ್ಮ ವಿರುದ್ಧ ಮಾಡಿರುವ ವೈಯಕ್ತಿಕ ಆರೋಪಗಳು ನೋವು ತಂದಿವೆ. ರಾಜಕೀಯ ಕೆಸರೆರಚಾಟ ಬಿಟ್ಟು ಅಭಿವೃದ್ಧಿ ವಿಚಾರಗಳ ಬಗ್ಗೆ ಚರ್ಚೆಯಾಗಲಿ ಎಂದು ಹೇಳಿದರು.

57 ಕೆರೆ ಯೋಜನೆಗೆ ಶ್ರಮ

ಸಿರಿಗೆರೆ ಶ್ರೀಗಳ ಆಶೀರ್ವಾದದಿಂದ 57 ಕೆರೆ ತುಂಬಿಸುವ ಯೋಜನೆ ಸಾಕಾರಗೊಳ್ಳಲು ಪ್ರಯತ್ನಿಸಲಾಗಿತ್ತು. ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ಆಡಳಿತಾವಧಿಯಲ್ಲಿ



ಯೋಜನೆ ಮಂಜೂರಾಗುವಲ್ಲಿ ತಾವು ಪ್ರಮುಖ ಪಾತ್ರ ವಹಿಸಿದ್ದಾಗಿ ತಿಳಿಸಿದರು.


ತುಪ್ಪದಹಳ್ಳಿ ಕೆರೆಗೆ 2022ರ ಡಿಸೆಂಬರ್‌ನಲ್ಲಿ ಪ್ರಾಯೋಗಿಕವಾಗಿ ನೀರು ಹರಿಸಿ ಬಾಗಿನ ಅರ್ಪಿಸಲಾಗಿತ್ತು. ತಾವು ತಂದ ಅನುದಾನದಲ್ಲಿ ಪೈಪ್‌ಲೈನ್ ಕಾಮಗಾರಿ ಪೂರ್ಣಗೊಳಿಸಿರುವುದನ್ನು ಹೊರತುಪಡಿಸಿ, ಹಿಂದಿನ ಯೋಜನೆಗಳನ್ನೇ ಮುಂದುವರಿಸಲಾಗಿದೆ ಎಂದು ಟೀಕಿಸಿದರು.

ಪಟ್ಟಣದ ನ್ಯಾಯಾಲಯದ ಮುಂಭಾಗದ ದ್ವಿಮುಖ ರಸ್ತೆ ಅಭಿವೃದ್ಧಿ ಕಾಮಗಾರಿಗೂ ತಾವೇ ಡಿಪಿಆರ್ ಸಿದ್ಧಪಡಿಸಿದ್ದಾಗಿ ಹೇಳಿದರು.

3,500 ಕೋಟಿ ಅಭಿವೃದ್ಧಿ ಕಾಮಗಾರಿಗಳ ದಾಖಲೆ

ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧ್ಯಕ್ಷನಾಗಿ ಸಾವಿರಾರು ಗಂಗಾ ಕಲ್ಯಾಣ ಯೋಜನೆಗಳಿಗೆ ನೆರವು ನೀಡಲಾಗಿದೆ. ಎರಡು ವಾಲ್ಮೀಕಿ ಭವನಗಳು, ಉಪ್ಪಾರ, ಅಂಬೇಡ್ಕರ್, ಬಾಬೂಜಿ ಸೇರಿದಂತೆ ಐದು ಸಮುದಾಯ ಭವನಗಳು, ಮೂರು ಬಸ್ ನಿಲ್ದಾಣಗಳು ಹಾಗೂ ಗುರುಸಿದ್ದಾಪುರ ಮತ್ತು ಉಚ್ಚಂಗಿದುರ್ಗ ದೇವಸ್ಥಾನ ಸನ್ನಿಧಿಯಲ್ಲಿ ಅತಿಥಿಗೃಹ ನಿರ್ಮಿಸಲಾಗಿದೆ ಎಂದು ವಿವರಿಸಿದರು.

ವಸತಿರಹಿತರಿಗೆ ಸುಮಾರು 12 ಸಾವಿರ



ಮನೆಗಳನ್ನು ಒದಗಿಸಲಾಗಿದ